ಸಂಪುಟ 01 । ಸಂಚಿಕೆ 88 । ಶುಕ್ರವಾರ 13 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ರೇಡಿಯೋ ದಿನ**
ರೇಡಿಯೊದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಫೆಬ್ರವರಿ 13 ರಂದು ವಿಶ್ವ ರೇಡಿಯೋ ದಿನವನ್ನು ಆಚರಿಸಲಾಗುತ್ತದೆ. ಹಲವಾರು ದೇಶಗಳಲ್ಲಿ, ಇದು ಮಾಹಿತಿಯನ್ನು ಒದಗಿಸುವ ಪ್ರಾಥಮಿಕ ಮೂಲವಾಗಿದೆ.

**2) ರಾಷ್ಟ್ರೀಯ ಉತ್ಪಾದಕತಾ ದಿನ**
ಭಾರತದಲ್ಲಿ ಉತ್ಪಾದಕತಾ ಸಂಸ್ಕೃತಿಯನ್ನು ಹೆಚ್ಚಿಸಲು ವಾರ್ಷಿಕವಾಗಿ ಫೆಬ್ರವರಿ 12 ರಂದು ಇದನ್ನು ಆಚರಿಸಲಾಗುತ್ತದೆ. ಇದನ್ನು ರಾಷ್ಟ್ರೀಯ ಉತ್ಪಾದಕತಾ ಮಂಡಳಿ (NPC) ಒಂದು ಥೀಮ್‌ನೊಂದಿಗೆ ಆಚರಿಸುತ್ತದೆ.

**3) ಫೆಬ್ರವರಿ – ಸರೋಜಿನಿ ನಾಯ್ಡು ಜನ್ಮ ವಾರ್ಷಿಕೋತ್ಸವ**

**4) ಫೆಬ್ರವರಿಯನ್ನು ಭಾರತದ ನೈಟಿಂಗೇಲ್ ಅಂದರೆ**
ಸರೋಜಿನಿ ನಾಯ್ಡು ಅವರ ಜನ್ಮ ವಾರ್ಷಿಕೋತ್ಸವವೆಂದು ಆಚರಿಸಲಾಗುತ್ತದೆ. ಅವರು ಫೆಬ್ರವರಿ 13 1879 ರಂದು ಹೈದರಾಬಾದ್‌ನಲ್ಲಿ ವಿಜ್ಞಾನಿ ಮತ್ತು ತತ್ವಜ್ಞಾನಿ ಅಘೋರನಾಥ ಚಟ್ಟೋಪಾಧ್ಯಾಯ ಮತ್ತು ಬರದ ಸುಂದರಿ ದೇವಿಗೆ ಜನಿಸಿದರು. ಅವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಮೊದಲ ಭಾರತೀಯ ಮಹಿಳಾ ಅಧ್ಯಕ್ಷೆ ಮತ್ತು ಈಗ ಉತ್ತರ ಪ್ರದೇಶ ಎಂದು ಕರೆಯಲ್ಪಡುವ ಯುನೈಟೆಡ್ ಪ್ರಾಂತ್ಯದ ಗವರ್ನರ್ ಆಗಿರುವ ಭಾರತೀಯ ರಾಜ್ಯದ ಮೊದಲ ಮಹಿಳಾ ಗವರ್ನರ್ ಕೂಡ ಆಗಿದ್ದರು.

## ಸುಭಾಷಿತ

ನಡೆದಷ್ಟೂ ದಾರಿ ಇದೆ, ಪಡೆದಷ್ಟೂ ಭಾಗ್ಯವಿದೆ ಎಂಬುದೇ ಜಗತ್ತು ನಮಗೆ ನೀಡುವ ಸಂದೇಶ.

–ವಿ.ಕೃ.ಗೋಕಾಕ್

# ನಾಲ್ವರು ಅಧಿಕಾರಿಗಳಿಗೆ ‘ಲೋಕಾ’ ಶಾಕ್
# 20ಕ್ಕೂ ಹೆಚ್ಚು ಕಡೆ ದಾಳಿ




**ಬೆಂಗಳೂರು: ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾವಣಗೆರೆ, ಬೆಂಗಳೂರು, ಧಾರವಾಡ, ಮೈಸೂರು, ಶಿವಮೊಗ್ಗ ಸೇರಿ ರಾಜ್ಯದ ಹಲವೆಡೆ ಏಕಕಾಲದಲ್ಲಿ ಮಿಂಚಿನ ದಾಳಿ ನಡೆಸಿ ನಾಲ್ವರು ಸರ್ಕಾರಿ ಅಧಿಕಾರಿಗಳ ಅಕ್ರಮ ಸಂಪತ್ತು ಬಯಲಿಗೆಳೆದಿದ್ದಾರೆ.**

ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ್ದಾರೆಂದು ಬಂದ ದೂರುಗಳನ್ನು ಆಧರಿಸಿ ಅದನ್ನು ಖಚಿತಪಡಿಸಿಕೊಂಡು ಬೆಳ್ಳಂಬೆಳಗ್ಗೆ ಸುಮಾರು 20 ಕ್ಕೂ ಹೆಚ್ಚು ಕಡೆ ಏಕಕಾಲದಲ್ಲಿ ಈ ದಾಳಿ ನಡೆಸಲಾಗಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಸಾಮಾಜಿಕ ಮಾಧ್ಯಮ ನಿರ್ವಹಣೆ ಸೇವೆ ದಾವಣಗೆರೆಯಲ್ಲಿ ಬೆಸ್ಕಾಂನಲ್ಲಿ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅರ್ಜುನ್ ಆರ್.ಹೆಚ್, ಮೈಸೂರಿನಲ್ಲಿ ಲೋಕೋಪಯೋಗಿ ಇಲಾಖೆ ಮುಖ್ಯಇಂಜಿನಿಯರ್ ಪುರುಷೋತ್ತಮ ದಾಸ್ ,ಬೆಂಗಳೂರಿನಲ್ಲಿ ಕರ್ನಾಟಕ ವಸತಿ ಶಿಕಣ ಇಲಾಖೆ ಸೂಪರಿಂಟೆಂಡೆಂಟ್ ಎಂಜಿನಿಯರ್ ಹೆಚ್.ಎಂ ಜನಾರ್ದನ್ ಹಾಗೂ ದಾರವಾಡದ ಸರ್ವೇಯರ್ ಸೋಮಲಿಂಗಪ್ಪ ಅವರಿಗೆ ಲೋಕಾ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ.

ಮುಖ್ಯ ಇಂಜಿನಿಯರ್ ಪುರುಷೋತ್ತಮ ದಾಸ್ ಅವರ ಮೈಸೂರಿನಲ್ಲಿರುವ ಮನೆ ,ಕಚೇರಿ ಸೇರಿದಂತೆ 11 ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಮೈಸೂರಿನಲ್ಲೇ 5 ಕಡೆ, ಬೆಂಗಳೂರಿನಲ್ಲಿ 6 ಕಡೆ ದಾಳಿ ನಡೆಸಿದ್ದು, ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ. ದಾಳಿ ಸಂದರ್ಭದಲ್ಲಿ ಅಪಾರ ಪ್ರಮಾಣದ ಚಿನ್ನಾಭರಣ, ನಗದು ಸೇರಿ ಬೆಲೆ ಬಾಳುವ ವಸ್ತುಗಳು ಪತ್ತೆಯಾಗಿವೆ.

ದಾವಣಗೆರೆಯ ಬೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅರ್ಜುನ್ ಅವರು ವಾಸವಿದ್ದ ನಿಟ್ಟುವಳ್ಳಿಯಲ್ಲಿರುವ ಮನೆ ಹಾಗು ಶಿವಮೊಗ್ಗದ ವಿಜಯನಗರ ಮತ್ತು ಗೋಪಾಲಗೌಡ ಬಡಾವಣೆಯಲ್ಲಿರುವ ಮನೆ ಮೇಲೆ ಅಧಿಕಾರಿಗಳ ತಂಡ ದಾಳಿ ಮಾಡಿದೆ.

ಇದಲ್ಲದೆ ಸಾಗರ ತಾಲೂಕಿನ ಆನಂದಪುರ ಸಮೀಪದ ತಳಲೆ ಗ್ರಾಮದಲ್ಲಿ 2.5 ಎಕರೆ ಮತ್ತು 4.5 ಎಕರೆ ವಿಸ್ತೀರ್ಣದ ಬೃಹತ್ ಫಾರ್ಮ್ ಹೌಸ್‌ಗಳ ಮೇಲೂ ಲೋಕಾಯುಕ್ತ ಡಿವೈಎಸ್ಪಿ ಚಂದ್ರಶೇಖರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದ್ದು, ಮಹತ್ವದ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಧಾರವಾಡದಲ್ಲಿ ಸರ್ವೇಯರ್ ಸೋಮಲಿಂಗಪ್ಪ ಅವರ ಭಾರತಿ ನಗರದ ನಿವಾಸ ಹಾಗೂ ಎಡಿಎಲ್‌ಆರ್ ಕಚೇರಿಯಲ್ಲಿ ಲೋಕಾಯುಕ್ತ ಪೊಲೀಸರು ತಪಾಸಣೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಎಸ್ಪಿ ಸಿದ್ದಲಿಂಗಪ್ಪ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದ್ದು, ಆಸ್ತಿ ವಿವರಗಳ ಕುರಿತು ಹೆಚ್ಚಿನ ಮಾಹಿತಿ ಕಲೆಹಾಕಲಾಗುತ್ತಿದೆ.

## ಬಿ.ಗಣೇಕಲ್ ಶಾಲೆಯಲ್ಲಿ ಕಸ್ಟರ ಮಟ್ಟದ ಕಲಿಕಾ ಹಬ್ಬ ಮಕ್ಕಳಿಗೆ ಕಲಿಕೆಯೇ ಒಂದು ಹಬ್ಬ ಶಿವರಾಜ ಪೂಜಾರಿ



ನೈಜ್ಯ ದೆಸೆ ನ್ಯೂಸ್

ಅರಕೇರಾ: ಮಕ್ಕಳ ಕಲಿಕೆಯನ್ನು ತಿಳಿಯುವ ಮಹತ್ವಾಕಾಂಕ್ಷೆಯ ಕಾರ್ಯಕ್ರಮಮಕ್ಕಳಿಗೆ ಕಲಿಕೆಯೇ ಒಂದು ಹಬ್ಬವಾಗುತ್ತದೆ. ಎಂದು ತಾಲೂಕು ಕ್ಷೇತ್ರ ಸಮನ್ವಯ ಅಧಿಕಾರಿ ಶಿವರಾಜಪೂಜಾರಿ ಅಭಿಪ್ರಾಯಪಟ್ಟರು. ಅವರು ಬುಧುವಾರ ಅರಕೇರಾ ತಾಲೂಕಿನ ಬಿ. ಗಣೇಕಲ್ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜನೆಗೊಂಡಿದ್ದ ಬಿ. ಗಣೇಕಲ್ ಕ್ಲಸ್ಟರ್‌ನ ಕಲಿಕಾಹಬ್ಬವನ್ನು ಉದ್ಘಾಟಿಸಿ ಮಾತನಾಡಿದರು.

ಕಲಿಕಾ ಹಬ್ಬವು ಮಕ್ಕಳಲ್ಲಿರುವ ವಿವಿಧ ಬಗೆಯ ಪ್ರತಿಭೆಯ ಸಾಮಥ್ರ್ಯವನ್ನು ಪ್ರಸ್ತುತಪಡಿಸಲು ಅವಕಾಶ ಮಾಡಿಕೊಡುತ್ತದೆ. ಜೊತೆಗೆ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಾಗುವಂತೆ ಮಾಡುತ್ತದೆ. ಗುಣಮಟ್ಟದ ಶಿಕ್ಷಣವನ್ನು ನೀಡಲು ಆದ್ಯತೆ ನೀಡಲಾಗಿದೆ. ಮಕ್ಕಳ ಕಲಿಕೆಗೆ ಶಿಕ್ಷಕರು ವಿಶೇಷ ಗಮನಹರಿಸಿ ಮಕ್ಕಳನ್ನು ಪ್ರೇರೇಪಿಸಬೇಕು ಎಂದರು. ಪ್ರಸ್ತಾವಿಕವಾಗಿ ಬಸವರಾಜ ಸಾತಲ್ ಸಿ ಆರ್ ಪಿ ಬಿ ಗಣೇಕಲ್ ಮಾತನಾಡಿದರು.

ವೆಂಕಟೇಶ್ ಇ ಸಿ ಓ ಶಿವಕುಮಾರ್ ನಾಡಗೌಡ ಬಿ ಆರ್ ಪಿ ಹಾಗೂ ಖಆಒಅ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು ರೈತ ಸಂಘದ ಅಧ್ಯಕ್ಷರು ಮುಖ್ಯ ಗುರುಗಳು ಶಿಕ್ಷಕರು ಅತಿಥಿ ಶಿಕ್ಷಕರು ಭಾಗವಹಿಸಿದ್ದರು.ಪ್ರಿಯಾಂಕ ಶಿಕ್ಷಕರು ಸ್ವಾಗತ ಕೋರಿದರು ಸದ್ದಾಂ ಹುಸೇನ್ ಶಿಕ್ಷಕರು ವಂದಿಸಿದರು.

## ಫೆ.14ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ 110/11 ಕೆವಿ ಯರಗೇರಾ ವಿದ್ಯುತ್ ಉಪ-ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಜಂಬಲದಿನ್ನಿ, ಎಲ್.ಕೆ.ದೊಡ್ಡಿ, ವೈ.ಮಲ್ಲಾಪೂರಿನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಫೆ.14ರ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಪ್ರಸರಣ ಖಾಸಗೀಕರಣಕ್ಕೆ ನೌಕರರ ವಿರೋಧ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಕರ್ನಾಟಕ ವಿದ್ಯುತ್ ಪ್ರಸರಣವನ್ನು ಕೇಂದ್ರ ಸರಕಾರ ಖಾಸಗೀಕರಣಗೊಳಿಸುವ ಉದ್ದೇಶವನ್ನು ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘದಿಂದ ವಿರೋಧಿಸಿ ಗುರುವಾರ ಶಾಂತಿಯುತ ಪ್ರತಿಭಟನೆ ನಡೆಸಿದರು.**

ನಂತರ ಎಇಇ ವೆಂಕಟೇಶ ಮಾತನಾಡಿ ಕೇಂದ್ರ ಸರಕಾರ ಮುಂಬರುವ ಅಧಿವೇಶನದಲ್ಲಿ ವಿದ್ಯುತ್ ಸುಧಾರಣ ಕಾಯ್ದೆ 2026ನ್ನು ಜಾರಿಗೆ ತಂದು ವಿದ್ಯುತ್ ಸರಬರಾಜು ಕಂಪನಿಗಳನ್ನು ಖಾಸಗಿಕರಣಗೊಳಿಸುವ ಉದ್ದೇಶ ಹೊಂದಿದ್ದು, 2026ರ ಕಾಯ್ದೆಯನ್ನು ವಿರೋಧಿಸಿ ರಾಷ್ಟ್ರಾದ್ಯಂತ ಒಂದು ದಿನ ಮುಷ್ಕರಕ್ಕೆ ಅಖಿಲ ಭಾರತ ವಿದ್ಯುತ್ ಇಂಜಿನಿಯರ್ ಮತ್ತು ನೌಕರರ ಒಕ್ಕೂಟ ನಿರ್ಧರಿಸಿದೆ ಎಂದು ಹೇಳಿದರು.



ಸಂದರ್ಭದಲ್ಲಿ ಕ.ವಿ.ಪ್ರನಿ.ನೌಕರರ ಸಂಘ ಅಧ್ಯಕ್ಷ ಶ್ರೀಶೈಲ ಪಾಟೀಲ್, ಕಾರ್ಯದರ್ಶಿ ಚಂದಯ್ಯ, ವೆಂಕಟೇಶ ಪಾಟೀಲ್ ತಿರುಪತಿ, ಮೌನೇಶ ಪಾಟೀಲ್, ಹನುಮನಗೌಡ, ವಿನಾಯಕ, ಬನ್ನೆಪ್ಪ, ರವಿ, ರಾಜಶೇಖರಗೌಡ, ಎಲ್ಲಾ ಶಾಖೆಯ ಶಾಖಾಧಿಕಾರಿಗಳು ಮತ್ತು ಸಂಘದ ಸದಸ್ಯರು ಅಧಿಕಾರಿಗಳು ಹಾಗೂ ನೌಕರರು, ಸಿಬ್ಬಂದಿಗಳಿದ್ದರು. ಮಸ್ಕಿ ಪಟ್ಟಣದಲ್ಲಿ ವಿದ್ಯುತ್ ಪ್ರಸರಣವನ್ನು ಖಾಸಗೀಕರಣಗೊಳಿಸುವುದುನ್ನು ವಿರೋಧಿಸಿ ಶಾಂತಿಯುತ ಪ್ರತಿಭಟನೆ ನಡೆಸಿದರು.

## ಹೋರಾಟ ಸಮಿತಿಯಿಂದ ಶಾಸಕ ರಾಜುಗೌಡರಿಗೆ ಮನವಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕೆ ಆಯ್ಕೆ ಮಾಡಿದ ಪಟ್ಟಣದಿಂದ 4 ಕೀ ಮೀ ದೂರ ಇರೋದ್ರಿಂದ ಅದನ್ನು ರದ್ದುಗೊಳಿಸಿ ಪಟ್ಟಣದಲ್ಲಿಯೇ ಸ್ಥಳ ಆಯ್ಕೆ ಮಾಡಲು ಅಧಿಕಾರಿಗಳಿಗೆ ಸೂಚಿಸಬೇಕೆಂದು ತಾಲೂಕ ಹೋರಾಟ ಸಮಿತಿ ಪದಾಧಿಕಾರಿಗಳು ದೇವರ ಹಿಪ್ಪರಗಿ ಶಾಸಕ ಭೀಮನಗೌಡ (ರಾಜುಗೌಡ) ಪಾಟೀಲರಿಗೆ ಮನವಿ ಸಲ್ಲಿಸಿದರು.**



ಗುರುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಾಸಕ ರಾಜುಗೌಡ ಪಾಟೀಲರಿಗೆ ಭೇಟಿ ಮಾಡಿದ ತಾಲೂಕ ಹೋರಾಟ ಸಮಿತಿಯ ಪದಾಧಿಕಾರಿಗಳು ಪ್ರಜಾ ಸೌಧ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಆಯ್ಕೆ ಮಾಡಿದ ಸ್ಥಳ ಬಹಳ ದೂರದಲ್ಲಿರುವುದರಿಂದ ಸಾರ್ವಜನಿಕರಿಗೆ, ಹಿರಿಯ ನಾಗರಿಕರಿಗೆ, ವಿಕಲಚೇತನರಿಗೆ, ಮಹಿಳೆಯರಿಗೆ ಆಗುವ ತೊಂದರೆ ವಿವರವಾಗಿ ಮನದಟ್ಟು ಮಾಡಿದರು ಹಾಗೂ ಪಟ್ಟಣದಲ್ಲಿ ಸರ್ಕಾರಿ ಸ್ಥಳಗಳು ಲಭ್ಯವಿದ್ದು ಅವುಗಳನ್ನು ಆಯ್ಕೆ ಮಾಡಲು ಇರುವ ಅವಕಾಶಗಳ ಕುರಿತು ಶಾಸಕರೊಂದಿಗೆ ಚರ್ಚಿಸಿ ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಶಾಸಕರು ಸದರಿ ವಿಷಯದ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡುತ್ತೇನೆ.

ಹಾಗೂ ನನ್ನ ಮತಕ್ಷೇತ್ರದ ಹೆಚ್ಚಿನ ಹಳ್ಳಿಗಳು ತಾಳಿಕೋಟಿ ತಾಲೂಕಿಗೆ ಒಳಪಡುವುದರಿಂದ ಸ್ಥಳೀಯ ಶಾಸಕರಿಗೂ ಹಾಗೂ ಸಂಬಂಧ ಪಟ್ಟ ಸಚಿವರಿಗೂ ಭೇಟಿಯಾಗಿ ಪಟ್ಟಣದಲ್ಲಿಯೇ ನಿರ್ಮಾಣ ಮಾಡಿ ಎಂದು ವಿನಂತಿಸುತ್ತೇನೆ ಎಂದು ತಿಳಿಸಿದರು. ಈ ಸಮಯದಲ್ಲಿ ಜೆ ಡಿ ಎಸ್ ಜಿಲ್ಲಾಧ್ಯಕ್ಷ ಬಸನಗೌಡ ಮಾಡಗಿ, ತಾಲೂಕು ಜೆ ಡಿ ಎಸ್ ಯುವ ಮುಖಂಡ ಮಡು ಸಾಹುಕಾರ್ ಹೋರಾಟ ಸಮಿತಿಯ ಪದಾಧಿಕಾರಿಗಳಾದ, ಮುತ್ತಪ್ಪ ಚಮಲಾಪೂರ, ವಿಜಯಸಿಂಗ್ ಹಜೇರಿ, ಪರಶುರಾಮ ತಂಗಡಗಿ ಮಯೂರ ಪಾಟೀಲ,ತಿಪ್ಪಣ್ಣ ಸಜ್ಜನ, ಅಮಿತಸಿಂಗ್ ಮನಗೂಳಿ, ಜೈಭೀಮ ಮುತ್ತಗಿ, ನಾಗೇಶ್ ಕಟ್ಟಿಮನಿ, ರವಿ ಕಟ್ಟಿಮನಿ, ರಾಗು ಮಾನೆ, ಸಿರಸಕುಮಾರ ಹಜೇರಿ, ಮುದುಕಪ್ಪ ಬಡಿಗೇರ, ಶರಣು ಗೊಟಖಂಡಕಿ,ನಿತಿನ್ ಜುಮ್ಮಣ್ಣ ನಾಲತವಾಡ, ವಿಠ್ಠಲ್ ಹಜೇರಿ, ಮಹಾಂತೇಶ ಕಟ್ಟಿಮನಿ, ರಾಜು ಹಜೇರಿ, ನಾರಾಯಣ ಹಿಂಗಮೋರೆ, ಮತ್ತಿತರರು ಇದ್ದರು.

# ಫೆ.15 ರಂದು ಶ್ರೀ ಅಂಬಿಗರ ಚೌಡಯ್ಯನವರ ಪ್ರತಿಮೆ ವೃತ್ತ ಲೋಕಾರ್ಪಣೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಕ್ಷಮಾಭಿವೃದ್ಧಿ ಸಂಘ(ರಿ) ತಾಳಿಕೋಟಿ ಇವರ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ನವರ ಪ್ರತಿಮೆ ಅನಾವರಣ, ನೂತನ ಸಭಾಭವನ ಉದ್ಘಾಟನೆ ಹಾಗೂ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಅನುಭವ ಮಂಟಪದ ಶಂಕುಸ್ಥಾಪನೆ ಇದೆ ಫೆಬ್ರವರಿ 15ರಂದು ಬೆಳಗ್ಗೆ 11:00 ಗಂಟೆಗೆ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ವೃತ್ತದಲ್ಲಿ ನಡೆಯಲಿದೆ ಎಂದು ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ ಬಿ. ತಂಗಡಗಿ ತಿಳಿಸಿದರು.**

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಕರೆದ ಪತ್ರಿಕಾಗೋಷ್ಠಿಯಲ್ಲಿ ಕಾರ್ಯಕ್ರಮದ ಮಾಹಿತಿಯನ್ನು ಹಂಚಿಕೊಂಡರು. ಫೆಬ್ರವರಿ 15ರಂದು ಮುಂಜಾನೆ 7:30 ಘಂಟೆಗೆ ಪಟ್ಟಣದ ಭೀಮನ ಭಾವಿಯಿಂದ ಸುಮಂಗಲೆಯರಿಂದ ಕುಂಭ ಕಳಸದೊಂದಿಗೆ ಗಂಗಸ್ಥಳಕ್ಕೆ ಪೂಜೆ ಸಲ್ಲಿಸಿ ನಂತರ ಜಗದ್ಗುರು ಪೂಜ್ಯಶ್ರೀ ಚೌಡಯ್ಯ ಮಹಾಸ್ವಾಮಿಗಳನ್ನು ಬೆಳ್ಳಿರಥದಲ್ಲಿ ಭವ್ಯ ಮೆರವಣಿಗೆಯೊಂದಿಗೆ ಪಟ್ಟಣದ ಪ್ರಮುಖ ಬೀದಿಯಲ್ಲಿ ಸಾಗಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ವೃತ್ತದ ವರೆಗೆ ಸಕಲ ವಾದ್ಯ ಮೇಳಗಳೊಂದಿಗೆ ನಡೆಯುವುದು. ಬೆಳಿಗ್ಗೆ 11 ಗಂಟೆಗೆ ಅಂಬಿಗರ ಚೌಡಯ್ಯನವರ ವೃತ್ತದಲ್ಲಿ ಅವರ ಪ್ರತಿಮೆಯ ವೃತ್ತದ ಅನಾವರಣ ಮಾಡಲಾಗುವುದು. ಮಧ್ಯಾಹ್ನ 12:00 ಘಂಟೆಗೆ ಪಟ್ಟಣದ ವಿದ್ಯಾ ಭಾರತಿ ಪ್ರೌಢಶಾಲೆ ಆವರಣದಲ್ಲಿ ಧರ್ಮಸಭೆ ನಡೆಯುವುದು.




ಇದರ ದಿವ್ಯ ಸಾನಿಧ್ಯವನ್ನು ಜಗದ್ಗುರು ಪೂಜ್ಯಶ್ರೀ ಶಾಂತ ಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಹಾಗೂ ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು ವಹಿಸುವರು. ಕೆ ಎಸ್ ಡಿ ಎಲ್ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡರು ಸಮಾರಂಭ ಉದ್ಘಾಟಿಸುವರು. ನಿಜಶರಣ ಅಂಬಿಗರ ಚೌಡಯ್ಯ ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ್ ತಂಗಡಗಿ ಅಧ್ಯಕ್ಷತೆ ವಹಿಸುವರು. ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಚೌಡಯ್ಯನವರ ಭಾವಚಿತ್ರಕ್ಕೆ ಹಾಗೂ ಜಗನ್ಮಾತೆ ಗಂಗಾಪರಮೇಶ್ವರಿ ಭಾವಚಿತ್ರಕ್ಕೆ ಶ್ರೀಮತಿ ಮಾಲಾ ಜಿ. ನಾರಾಯಣರಾವ್ ಪುಷ್ಪಾರ್ಚನೆ ಮಾಡುವರು. ಮಾಜಿ ಸಚಿವ ಪ್ರಮೋದ ಮಧ್ವರಾಜ್ ಹಾಗೂ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಚೌಡಯ್ಯನವರ ಪ್ರತಿಮೆ ವೃತ್ತ ಅನಾವರಣಗೊಳಿಸುವರು.

ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಹಾಗೂ ಮಾಜಿ ಶಾಸಕ ಶರಣಪ್ಪ ಸುಣಗಾರ ಅನುಭವ ಮಂಟಪದ ಶಂಕುಸ್ಥಾಪನೆ ನೆರವೇರಿಸುವರು. ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಹಾಗೂ ಜಿ.ಪಂ. ಮಾಜಿ ಸದಸ್ಯ ಮಹಾಂತಗೌಡ ಪಾಟೀಲ ಸಮುದಾಯ ಭವನ ಉದ್ಘಾಟನೆ ಮಾಡುವರು. ಮುಖ್ಯ ಅತಿಥಿಗಳಾಗಿ ಬಸವರಾಜ್ ಸಪ್ಪನಗೋಳ, ಬಿ.ಕೆ.ಮೋಹನ ಕುಮಾರ, ಶಿವಕುಮಾರ ನಾಟೀಕಾರ,ಜೆ.ಟಿ.ವೆಂಕಟೇಶ, ಡಾ. ಎಸ್.ಕೆ.ಮೇಲಕಾರ, ಎಲ್ ಸಿ ಕೋಲ್ಕಾರ, ಶಿವಾಜಿ ಮೆಟಗಾರ ಅಮರೇಶಣ್ಣ ಕಾಮನಕೇರಿ ಆಗಮಿಸುವರು. ಕಾರ್ಯಕ್ರಮದಲ್ಲಿ ಪಟ್ಟಣ ಹಾಗೂ ತಾಲೂಕಿನಿಂದ ಸುಮಾರು 2000 ಕ್ಕಿಂತಲೂ ಹೆಚ್ಚು ಜನರು ಭಾಗವಹಿಸಲಿದ್ದು ಸರ್ವ ಸಮಾಜದ ಗಣ್ಯರು ಹಿರಿಯರನ್ನು ಆಮಂತ್ರಿಸಲಾಗುತ್ತಿದ್ದು ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಬೇಕೆಂದು ಅವರು ಕೇಳಿಕೊಂಡರು.

ಪತ್ರಿಕಾಗೋಷ್ಠಿಯಲ್ಲಿ ಸಮಾಜದ ಪ್ರಮುಖರಾದ ಶಶಿಕಾಂತ ಮೂಕಿಹಾಳ,ಎಂ.ಎಚ್. ಜೋಲಿ ವಕೀಲರು,ಬಾಲು ಅಸ್ಕಿ, ಬಸವರಾಜ ಯಡಹಳ್ಳಿ, ಮಾನಪ್ಪ ನಾಯ್ಕೋಡಿ ರಮೇಶ ಮೂಕಿಹಾಳ, ಭೀಮಣ್ಣ ಚಳ್ಳಗಿ, ಸಂಗಮೇಶ ಚಳ್ಳಗಿ,ಬಸವರಾಜ ತಳವಾರ, ಮಲ್ಲಿಕಾರ್ಜುನ್ ನಾಟಿಕಾರ ಕಾಶಿನಾಥ ಮದರಿ ಭೀಮಣ್ಣ ತಳವಾರ, ಮಲ್ಲಿಕಾರ್ಜುನ ನಾಯ್ಕೋಡಿ ಮತ್ತಿತರರು ಇದ್ದರು.

## ಸಾಹಿತ್ಯ ಸಿಂಚನ

ಅಕ್ಕರದ ಸಂಗ..!

ಸದಾ ಬಾಳ ಧ್ಯಾನವಾಗಲಿ ಪುಸ್ತಕ
ನಿತ್ಯ ಲೀನ ವಿಲೀನವಾಗಲಿ ಮಸ್ತಕ
ನಿರತವಾಗಲಿ ಪದಾಮೋದ ಪಾನ
ನಿರಂತರವಾಗಲಿ ಅಕ್ಷರದ ಯಾನ.!

ಪುಟ-ಪುಟದಿ ಮನವಾಗಲಿ ಮಗ್ನ
ಚಿತ್ತದಿ ಸತತವಾಗಲಿ ಓದಿನ ಯಜ್ಞ
ಅನುದಿನ ಸಾಕಾರವಾಗಲಿ ಅಧ್ಯಯನ
ಝೇಂಕರಿಸಲಿ ಅರಿವಿನ ಸಂಕೀರ್ತನ.!

ನರ-ನರಗಳಲಿ ಸಂಚರಿಸಲಿ ಅಕ್ಷರ
ಎದೆಯ ಬೆಳದಿಂಗಳಾಗಿಸಲಿ ಅಕ್ಕರ
ಧಮನಿ-ಧಮನಿಯಲಿ ಚಿಮ್ಮಲಿ ಸ್ವರ
ಚಿತ್ತವ ಚಿತ್ತಾರವಾಗಿಸಲಿ ಸ್ವರ-ಸಾರ.!

ಪ್ರತಿ ಅಕ್ಷರ, ಪದ, ಸಾಲು, ವಾಕ್ಯ
ಒಳಗಿಳಿದು ಸೇರಲಿ ಚಿತ್ತಭಿತ್ತಿ ಸಖ್ಯ
ಬೆಸೆಯುತ ಬೆಳಗಲಿ ನೆನಪಿನ ದೀಪ್ತಿ
ಹಚ್ಚ ಹಸಿರಾಗಲಿ ಮಸ್ತಕದ ವ್ಯಾಪ್ತಿ.!

ಅನುದಿನ ತಪಸ್ಸಾಗಲಿ ಓದುಬರಹ
ಅನುಕ್ಷಣ ಇಮ್ಮಡಿಸಲಿ ಕಲಿಕೆದಾಹ
ನುಡಿಯ ತೇಜಸ್ಸಾಗಲಿ ಚಾತುರ್ಯ
ನಡೆಯ ವರ್ಚಸ್ಸಾಗಲಿ ಗಾಂಭೀರ್ಯ.!

ಕಣ-ಕಣವೂ ಹಂಬಲಿಸಲಿ ಪುಸ್ತಕ
ಸಾಕಾರವಾಗಲಿ ಅಕ್ಷರದ ಆರಾಧನೆ
ಕ್ಷಣ-ಕ್ಷಣವೂ ಸಂಭ್ರಮಿಸಲಿ ಮಸ್ತಕ
ಮಾರ್ದನಿಸಲಿ ಮಧುರ ಸಂಕೀರ್ತನೆ.!

ಒಡಲ ಕಾರಂಜಿಯಾಗಲಿ ಜ್ಞಾನಝರಿ
ಜೀವಚೈತನ್ಯ ಚಿಮ್ಮಿಸಲಿ ಅರಿವಪ್ರಹರಿ
ಅರಿವೆ ಗುರುವಾಗಿ ತೋರಲಿ ದಾರಿ
ಕರವಾಗಿ ಕಾಪಿಡುತ ಸೇರಿಸಲಿ ಗುರಿ.!

ಎ.ಎನ್.ರಮೇಶ್.ಗುಬ್ಬಿ.

## ಕಲಾ ತಂಡಗಳ ಮೂಲಕ ಆರೋಗ್ಯ ಸೇವೆಗಳನ್ನು ಜನತೆಗೆ ತಲುಪಿಸಲು ನಿರಂತರ ಜಾಗೃತಿ :ಡಾ ನಾಗರಾಜ.

ನೈಜ್ಯ ದೆಸೆ ನ್ಯೂಸ್

ಕರ್ನಾಟಕ ಸರಕಾರವು ಆರೋಗ್ಯ ಸೇವೆಗಳನ್ನು ಜನರಿಗೆ ತಲುಪಿಸುವ ಕಾರ್ಯವನ್ನು ಕಲಾ ತಂಡದಿಂದ ಬೀದಿ ನಾಟಕದ ಮೂಲಕ ನೀಡಲಾಗುತ್ತಿದ್ದು ಜನರು ಹೆಚ್ಚಿನ ಮಾಹಿತಿ ಪಡೆದುಕೊಳ್ಳಲು ದೇವದುರ್ಗದ ತಾಲೂಕಾ ಸಾರ್ವಜನಿಕ ಅಸ್ಪತ್ರೆಯ ವೈದ್ಯಾಧಿಕಾರಿ ಡಾ ನಾಗರಾಜ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾ-ರಿಗಳ ಕಾರ್ಯಾಲಯ ದೇವದುರ್ಗ ಮಾಹಿತಿ ಶಿಕ್ಷಣ ಸಂವಹನ ವಿಭಾಗದಿಂದ ದೇವದುರ್ಗದ ಆಸ್ಪತ್ರೆಯ ಹತ್ತಿರ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಾನಪದ ಕಲಾ ಪ್ರದರ್ಶನದ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಜಾಗೃತಿಗಾಗಿ ಜಾನಪದ ಕಲಾ ಪ್ರದರ್ಶನದ ವೇಳೆ, ಮಾತನಾಡಿ ಕರ್ನಾಟಕ ಸರಕಾರ ನಿಮ್ಮ ಆರೋಗ್ಯ-ನಮ್ಮ ಆಧ್ಯತೆ



ಎಂಬ ಧ್ಯೆಯವಾಕ್ಯದೊಂದಿಗೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಸುರಕ್ಷಿತ ಹೆರಿಗೆ ಸೇವೆ, ಲಸಿಕೆಗಳು, ಅಗತ್ಯವುಳ್ಳವ-ರಿಗೆ ರಕ್ತ ಒದಗಿಸುವಿಕೆ, ಸಂತಾನ ನಿರೋಧಕ ಶಸ್ತ್ರಚಿಕಿತ್ಸೆ, ಹೃದಯ ಆರೈಕೆಗಾಗಿ ಡಾ ಪುನೀತ್ ರಾಜಕುಮಾರ್ ಹೃದಯಜ್ಯೋತಿ ಯೋಜನೆ, ಕಿಡ್ನಿ ಆರೈಕೆಗೆ ಡಯಾಲಿಸಿಸ್ ಸೇವೆ ಮುಂತಾದವುಗಳನ್ನು ಯಾವುದೇ ಖಾಸಗಿ ಆಸ್ಪತ್ರೆಗಳಿಗೆ ಕಡಿಮೆ ಇಲ್ಲದಂತೆ ಸೇವೆ ನೀಡಲಾಗುತ್ತಿದ್ದು, ಇವೆಲ್ಲವುಗಳ ಜೊತೆಗೆ ಬಾಲ್ಯವಿವಾಹ ತಡೆ, ಭ್ರೂಣ ಲಿಂಗಪತ್ತೆ ನಿಷೇಧ ಕಾಯ್ದೆಯಡಿ ದಂಡ ಜೈಲು ಶಿಕ್ಷೆ, ನಗುಮಗು, 108 ಆಂಬ್ಯುಲೆನ್ಸ್ ಸೇವೆ, ಸಮುದಾಯದಲ್ಲಿ ಕಂಡುಬರಬಹುದಾದ ಸಾಂಕ್ರಾಮಿಕ ರೋಗಗಳ ತಡೆಗೆ ಕ್ಷಿಪ್ರ ನಿಗಾವಣೆ, ಪರೀಕ್ಷೆ, ಕುಷ್ಟ ರೋಗ, ಕ್ಷಯರೋಗ, ಉಪಶಮನ ಆರೈಕೆ, ಆಪ್ತ ಸಮಾಲೋಚನೆ, ಕುರಿತು ಜಾಗೃತಿ ನೀಡಲಾಗುತ್ತಿದ್ದು,

ಜೊತೆಗೆ ಉಚಿತ ಕನ್ನಡಕ ವಿತರಣೆ, ಕಣ್ಣಿನ ಪೋರೆ ಶಸ್ತ್ರಚಿಕಿತ್ಸೆ, ದಂತ ಭಾಗ್ಯದಡಿ ಹಲ್ಲಿನ ಸೇಟ್ ಅಳವಡಿಕೆ, ಕುರಿತು ತಾಲೂಕಿನಲ್ಲಿ ಶೃತಿ ಸಂಸ್ಕೃತಿ ಕಲಾ ತಂಡದಿಂದ ನೀಡುವ ಜಾಗೃತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಲು ವಿನಂತಿಸಿದರು. ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ ನಿರ್ಮಲಾದೇವಿ, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಪ್ಪ, ಹಿರಿಯ ಆರೋಗ್ಯ ನಿರಿಕ್ಷಣಾಧಿಕಾರಿ ಸೋಮಪ್ಪ, ಚನ್ನಬಸವಯ್ಯ ಹೀರೆಮಠ, ಹಿರಿಯ ಫಾರ್ಮಸಿ ಅಧಿಕಾರಿ ಜಯಕುಮಾರ, ಆರೋಗ್ಯ ನೀರಿಕ್ಷಣಾಧಿಕಾರಿ ಚಂದ್ರಾಮಪ್ಪ, ಶರಣಪ್ಪ ರಾಂಪೂರು, ಚಾಂದಬೀ ಇಟಗಿ, ಇಮಾಮ್ ಅಲಿ ಇಲಕಲ್ಲ, ಮನೋಜಕುಮಾರ, ಕರಗುಳಿ ಆಂಜನೇಯ, ಬಸಪ್ಪ ಮಾಶೇಟ್ಟಿ, ಆಶಾ ಕಾರ್ಯಕರ್ತೆ ಲಕ್ಷ್ಮೀ, ಕಲಾ ತಂಡದ ಡಿಂಗ್ರಿ ನರಸಪ್ಪ ಸೇ-ರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಮಾನ್ವಿ ವಿಶ್ವಕರ್ಮ ಸಂಘಟನಾ ಸಭೆ




ನೈಜ್ಯ ದೆಸೆ ನ್ಯೂಸ್

ಮಾನವಿ: ನಗರದ ಶ್ರೀ ಮಾರಿಕಾಂಬಾ ಹಾರ್ಡ್ವೇವೆರ್ ಹತ್ತಿರ ವಿಶ್ವಕರ್ಮ ಸಮಾಜದ ಮುಖಂಡರು,ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯ ಕಾರ್ಯದರ್ಶಿ ಸೋಮಣ್ಣ ಪತ್ತಾರ ಸುಕಲಪೇಟೆ,ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ ಅಧ್ಯಕ್ಷ ಉದಯಕುಮಾರ ಪತ್ತಾರ ಮಸ್ಕಿ ಹಿರಿಯ ಮುಖಂಡರಾದ ಮನೋಹರ ವಕೀಲರು ನೇತೃತ್ವದಲ್ಲಿ ಪ್ರಥ-’ಮ ವಿಶ್ವಕರ್ಮ ಸಂಘಟನಾ ಸಭೆ ನಡೆಯಿತು.

ಸಭೆಯನ್ನುದ್ದೇಶಿಸಿ ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷರಾದ ಉದಯಕುಮಾರ ಪತ್ತಾರ ಮಾತನಾಡಿ ಮಾನವಿ ತಾಲೂಕಿನಲ್ಲಿ ಎಲ್ಲಾ ಹೋಬಳಿ ಗ್ರಾಮಗಳಲ್ಲಿ ವಿಶ್ವಕರ್ಮ ಸಮಾಜದ ಬಂಧುಗಳು ಒಂದಾಗಿ ಮುಖ್ಯ ವಾಹಿನಿಗೆ ಬರಬೇಕು,ಪ್ರತಿಯೊಂದು ಕ್ಷೇತ್ರದಲ್ಲಿ ಭಾಗವಹಿಸಬೇಕು,ವಿಶ್ವಕರ್ಮ ಸಮಾಜ ಕಾಯಕ ಸಮಾಜವಾಗಿದೆ.ನಮ್ಮ ಸಮಾಜದ ಧೀಮಂತ ನಾಯಕರಾದ ಕೆ.ಪಿ.ನಂಜುಂಡಿ ಕನಸಿನಂತೆ ನಾವುಗಳು ಎಲ್ಲಾ ಸಮಾಜಗಳಂತೆ ಸಂಘಟಿತಾರಾಗಿ ಸರ್ಕಾರದ ಸೌಲಭ್ಯಗಳನ್ನು ಪಡೆಯುವಂತಗಬೇಕು.

ಆದ್ದರಿಂದ ನಾವೆಲ್ಲರೂ ಸಮಾಜವನ್ನು ಗ್ರಾಮೀಣ ಮಟ್ಟದಿಂದ ಸಂಘಟಿಸೋಣ ಎಂದು ಸಮಾಜದ ಬಂಧುಗಳಿಗೆ ಸಂಘಟಿರಾಗುವಂತೆ ಕರೆ ನೀಡಿದರು. ಇದೇವೇಳೆ ನೂತನವಾಗಿ ಆಯ್ಕೆಯಾದ ಜಿಲ್ಲಾ ವಿಶ್ವಕರ್ಮ ಸಮಾಜದ ಉಪಾಧ್ಯಕ್ಷ ಧರ್ಮಣ್ಣ ಗುಂಜಳ್ಳಿ ಹಾಗೂ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಜಿಲ್ಲಾ ಉಪಾಧ್ಯಕ್ಷ ದೇವರಾಜಕಂಬಾರ ಮಸ್ಕಿ,ಯುವ ಘಟಕ ಅಧ್ಯಕ್ಷ ಸುರೇಶ ಸಂಗಾಪುರ,ಪ್ರಧಾನ ಕಾರ್ಯದರ್ಶಿ ಚನ್ನಪ್ಪ ಕೆ.ಹೊಸಹಳ್ಳಿ,ಸಂಘಟನಾ ಕಾರ್ಯದರ್ಶಿ ರಾಜು ಬಳಗಾನೂರು ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂಧರ್ಭದಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಾಜಿ ಯುವ ಘಟಕದ ಅಧ್ಯಕ್ಷ ವಿಜಯಕುಮಾರ ಮಸ್ಕಿ, ಕಾಳಪ್ಪ ಮಸ್ಕಿ,ಮಂಜುನಾಥ ಕೊಟ್ನೆಕಲ್ ಸಿಂಧನೂರು,ಅಮರನಾಥ ಮಾನವಿ,ಶಿವರಾಜ ಹಾರ್ಡ್ವೇವೆರ್ ಮಾನವಿ,ಈರಣ್ಣ ಹರವಿ,ಮಹೇಶ ನಿರಮಾನ್ವಿ,ಬದ್ರಿ ಮಾನವಿ,ಬ್ರಮ್ಹಯ್ಯ ಕೊಟ್ನೆಕಲ್,ಶ್ರೀಧರ ಮಾನವಿ,ಸರ್ವಜ್ಞ ಸಂಗಾಪುರ,ಬಸವರಾಜ ಸಂಗಾಪುರ, ಬಸವರಾಜ ಜಂಬಲದಿನ್ನಿ,ಷಣ್ಮುಖ ಸಂಗಾಪುರ,ಸುರೇಶ ಬಿ.ಸಂಗಾಪುರ, ವೀರಭದ್ರಿ ಸಂಗಾಪುರ,ಬ್ರಹ್ಮಯ್ಯ ಶಿಲ್ಪಿ ಸಂಗಾಪುರ,ಚಾಮರಾಜ ಬೊಮ್ಮನಾಳ, ಉದಯ ಸಂಗಾಪುರ,ಮೋಹನ್ ಮಾನವಿ,ವೀರೇಶ ಮಾನವಿ (ಬ್ಯಾಗವಾಟ್),ದೇವರಾಜ(ಬ್ಯಾಂಕ್) ಸಂಗಾಪುರ,ಅಮರೇಶ ಸಂಗಾಪುರ,ಕಾಳಪ್ಪ ಸಂಗಾಪುರ ಇನ್ನೂ ಹಲವಾರು ಸಮಾಜದ ಹಿರಿಯರು, ಯುವಕರು ಉಪಸ್ಥಿತರಿದ್ದರು.

## ಪುಸ್ತಕಗಳ ಮುದ್ರಿಸಲು ಕನಿಷ್ಠ ದರಪಟ್ಟಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಇಲ್ಲಿನ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇ-ರಿಯಿಂದ 2024-25ನೇ ಸಾಲಿನ ಜಿಲ್ಲಾ ಅಂಕಿ ಅಂಶ ನೋಟದ ಪುಸ್ತಕಗಳು ಹಾಗೂ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕಗಳ ಮುದ್ರಿಸಲು ಕನಿಷ್ಠ ದರಪಟ್ಟಿಗೆ ಅರ್ಜಿ ಆಹ್ವಾನಿಸಲಾಗಿದೆ. ರಾಯಚೂರು ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕಗಳು ಹಾಗೂ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕಗಳ ಮುದ್ರಿಸುವ ಕರಡು ಪ್ರತಿ ತಯಾರಾಗಿದ್ದು, ಅವುಗಳನ್ನು ಯಾವುದೇ ಅಕ್ಷರದೋಷ, ವ್ಯಾಕರಣ ದೋಷಗಳು ಇರದಂತೆ ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕದ ಮುಂಭಾಗ ಮತ್ತು ಹಿಂಭಾಗದ 2 ಪುಟಗಳು ಹಾಗೂ 40 ನಕ್ಷೆಗಳ ಒಳಪುಟಗಳು ಬಣ್ಣಗಳಿಂದ ಮುದ್ರಿತವಾಗಬೇಕು ಹಾಗೂ 60 ಪುಟಗಳ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕವನ್ನು (ಮುಂಭಾಗ ಮತ್ತು ಹಿಂಭಾಗದ 2 ಬಣ್ಣದ ಪುಟಗಳು) ಅಂದವಾಗಿ ಮುದ್ರಿಸಿ ಕೊಡಬೇಕಾಗಿದೆ. ರಾಯಚೂರು ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕದ 500 ಪುಸ್ತಕಗಳನ್ನು & ಆರ್ಥಿಕ & ಸಾಮಾಜಿಕ ಅವಲೋಕನ 200 ಪುಸ್ತಕಗಳನ್ನು ಮುದ್ರಣ ಮಾಡುವುದಕ್ಕಾಗಿ ದರಪಟ್ಟಿಯನ್ನು ಮೂರು ಲಕ್ಷ ರೂಪಾಯಿಗಳಿಗೆ ಕರೆಯಲಾಗಿದೆ. ಇಚ್ಛೆಯುಳ್ಳ ಮುದ್ರಣಾಲಯದವರು ಈ ದರಪಟ್ಟಿಗಳನ್ನು ಪ್ರಕಟವಾದ ದಿನಾಂಕದಿಂದ ಒಂದು ವಾರದೊಳಗಾಗಿ ಅಂದರೆ ದಿನಾಂಕ:10-02-2026 ರಿಂದ ದಿನಾಂಕ:18.02.2026 ರ ಸಂಜೆ 5.30 ಗಂಟೆಯೊಳಗಾಗಿ ಈ ಕಾರ್ಯಾಲಯಕ್ಕೆ ಪುಸ್ತಕ ಒಂದಕ್ಕೆ ತಗಲುವ ದರವನ್ನು ನಮೂದಿಸಿ ಕನಿಷ್ಠ ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸತ್ತಕ್ಕದ್ದು ಮತ್ತು ಈ ಕಛೇ-ರಿಗೆ ಸ್ವೀಕೃತಿಯಾದ ದರಪಟ್ಟಿಗಳನ್ನು ದಿನಾಂಕ: 19.02.2026 ರ ಬೆಳಿಗ್ಗೆ 11ಗಂಟೆಗೆ ಈ ಕಚೇರಿಯಲ್ಲಿ ತೆರೆಯಲಾಗುವುದು ಕಾರಣ ದರಪಟ್ಟಿಗಳನ್ನು ಸಲ್ಲಿಸಿದವರು ಈ ಪತ್ರದಲ್ಲಿ ತಿಳಿಸಿದ ವೇಳೆಯಲ್ಲಿ ಹಾಜರಾಗಬೇಕು. ಅತೀ ಕಡಿಮೆ ದರಪಟ್ಟಿ ಸಲ್ಲಿಸುವ ಮುದ್ರಣಾಕಾರರು ಕಾರ್ಯ ಆದೇಶ ನೀಡಿದ 07 ದಿವಸದೊಳಗಾಗಿ ಯಾವುದೇ ದೋಷವಿಲ್ಲದಂತೆ ಪರಿಶೀಲಿಸಿ, ಪ್ರಕಟಣೆಯಲ್ಲಿ ತಿಳಿಸಿದ ನಿಬಂಧನೆಗಳಿಗೆ ಅನುಗುಣವಾಗಿ ಪುಸ್ತಕಗಳನ್ನು ಮುದ್ರಿಸಿ ಕೊಡತಕ್ಕದ್ದು ಹಾಗೂ ಒಟ್ಟು ಬಿಲ್ಲಿನ ಮೊತ್ತದಲ್ಲಿ ಶೇ.2 ಟಿಡಿಎಸ್‌ನ್ನು ಕಟಾಯಿಸಿ ಹಣವನ್ನು ಪಾವತಿಸಲಾಗುವುದು ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೇಸಿಗೆ ನಿರ್ವಹಣೆಗೆ ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ: ಶಾಸಕರಾದ ಬಸನಗೌಡ ದದ್ದಲ್ ಸೂಚನೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಬೇಸಿಗೆಯ ಅವಧಿಯಲ್ಲಿ ರಾಯಚೂರು ಗ್ರಾಮೀಣ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಸರಿಯಾದ ರೀತಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ವ್ಯವಸ್ಥೆಯಾಗುವುದು ಸೇರಿದಂತೆ ಫೆಬ್ರವರಿ, ಮಾರ್ಚ, ಏಪ್ರೀಲ್, ಮೇ ಹಾಗೂ ಜೂನ್ ಅವಧಿವರೆಗೆ ಬೇಸಿಗೆ ನಿರ್ವಹಣೆಗೆ ಕ್ರಿಯಾಯೋಜನೆ ಸಿದ್ಧಪಡಿಸಬೇಕು ಎಂದು ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.12ರಂದು ನಡೆದ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೇಸಿಗೆಯ ಅವಧಿಯಲ್ಲಿ ತುರ್ತು ಸಂದರ್ಭದಲ್ಲಿ ನೀರು ಪೂರೈಕೆಗೆ ಅನುಕೂಲವಾಗುವಂತೆ ಅಗತ್ಯ ಏರ್ಪಾಡನ್ನು ಈಗಿನಿಂದಲೇ ಮಾಡಿಕೊಳ್ಳಬೇಕು. ಮುಖ್ಯ ಜಲಸಂಗ್ರಹಗಾರಗಳಾದ ಕೆರೆಗಳಲ್ಲಿ ಲಭ್ಯವಿರುವ ಗರಿಷ್ಠ ಮತ್ತು ಕನಿಷ್ಠ ನೀರಿನ ಸಾರ?ಥ್ಯದ ಬಗ್ಗೆ ಗಮನ ಹರಿಸಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಬಹುದಾದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು? ಗ್ರಾಮಗಳ ಸಂಖ್ಯೆ ಎಷ್ಟು? ಯಾವ ಯಾವ ಕಡೆಗಳಲ್ಲಿ



ನೀರಿನ ಸಮಸ್ಯೆಯಾಗಬಹುದು? ನೀರು ಸರಬರಾಜು ಮೂಲಗಳಾದ ನದಿ ಹಳ್ಳ ಬೋರವೆಲ್‌ಗಳ ಸಂಖ್ಯೆ ಎಷ್ಟು? ಬೇಕಾಗುವ ಅನುದಾನ ಎಷ್ಟು? ಇದುವರೆಗೆ ಬಾಡಿಗೆ ಪಡೆದಿರುವ ಖಾಸಗಿ ಬೋರವೆಲ್‌ಗಳ ಸಂಖ್ಯೆ? ಖಾಸಗಿ ಬೋರವೆಲ್ ಮೂಲಕ ನೀರು ಸರಬರಾಜು ಮಾಡಿದ ಗ್ರಾಮಗಳ ಸಂಖ್ಯೆ? ಈ ರೀತಿಯ ನಾನಾ ಅಂಶಗಳ ಬಗ್ಗೆ ಕೂಡಲೇ ಅಧಿಕಾರಿಗಳು ಕಾಳಜಿಯಿಂದ ಕ್ರಿಯಾಯೋಜನೆ ಸಿದ್ಧಪಡಿಸಿ ಕಾರ್ಯನುಷ್ಠಾನ ಮಾಡಬೇಕು ಎಂದು ಶಾಸಕರು ಸೂಚನೆ ನೀಡಿದರು.

ಬೇಸಿಗೆಯ ಅವಧಿಯಲ್ಲಿ ಯಾವುದೇ ಕಡೆಗಳಲ್ಲಿ ಬೋರವೆಲ್‌ಗಳಿಂದ ನೀರು ಸ್ಥಗಿ-ತವಾಗಿ ಕೊರತೆಯಾದಲ್ಲಿ ಅಂತಹ ಕಡೆಗೆ ಖಾಸಗಿ ಬೋರವೆಲ್‌ಗಳು ಎಲ್ಲೆಲ್ಲಿ ಇವೆ ಎಂಬುದರ ಬಗ್ಗೆ ಮುಂಚಿತವಾಗಿಯೇ ಪಟ್ಟಿ ಮಾಡಿ ರ?ಯಾಯ ವ್ಯವಸ್ಥೆಗೆ ಈಗಿನಿಂದಲೇ ಯೋಜನೆ ರೂಪಿಸಬೇಕು ಎಂದು ಶಾಸಕರು ಎಲ್ಲ ಪಿಡಿಓಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಮೇಲ್ವಿಚಾರಣೆಗೆ ಸೂಚನೆ: ನಮ್ಮ ಗ್ರಾಮಕ್ಕೆ ನೀರು ಸಿಗುತ್ತಿಲ್ಲ ಎಂದು ಬೇಸಿಗೆಯ ಅವಧಿಯಲ್ಲಿ ಯಾವುದೇ ಗ್ರಾಮಸ್ಥರಿಂದ ದೂರುಗಳು ಬರಬಾರದು. ಪಿಡಿಓಗಳು ಪಂಚಾಯತ್ ವ್ಯಾಪ್ತಿಯ ಎಲ್ಲ ಗ್ರಾಮಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಬಗ್ಗೆ ಗ್ರಾಮಸ್ಥರಿಂದ ತಿಳಿದುಕೊಳ್ಳಬೇಕು.

ಗ್ರಾಮಸ್ಥರೊಂದಿಗೆ ಉತ್ತಮ ಬಾಂಧವ್ಯ ಇಟ್ಟುಕೊಂಡು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಶಾಸಕರು, ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಕಾಲಕಾಲಕ್ಕೆ ಕಂದಾಯ ಮತ್ತು ಪಿಡಿಓಗಳ ಸಭೆ ನಡೆಸಿ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಶಾಸಕರು ನಿರ್ದೇಶನ ನೀಡಿದರು. ವಾರದ ಗಡುವು: ನೀವು ನಿಯಮಿತವಾಗಿ ಗ್ರಾಮಗಳಿಗೆ ಭೇಟಿ ನೀಡುತ್ತಿದ್ದೀರಾ? ಆಯಾ ಗ್ರಾಮಗಳಲ್ಲಿ ನೀರಿನ ಪರಿಸ್ಥಿತಿ ಏನಿದೆ ಎಂಬುದು ತಿಳಿದಿದೆಯಾ? ಎಂದು ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಶಾಸಕರು ಪ್ರಶ್ನಿಸಿದರು.

ಗ್ರಾಮೀಣ ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಕೆರೆಗಳ ಸ್ಥಿತಿ, ಕುಡಿವ ನೀರಿನ ಪರಿಸ್ಥಿತಿ ಸೇರಿದಂತೆ ಸಮಗ್ರ ಮಾಹಿತಿಯನ್ನು ನೀಡುವಂತೆ ಆರ್‌ಡಬ್ಲ್ಯುಎಸ್ ಅಧಿಕಾರಿಗಳಿಗೆ ಶಾಸಕರು ವಾರದ ಗಡುವು ವಿದಿಸಿದರು. ವರದಿ ಒಪ್ಪಿಸಿದ ಅಧಿಕಾರಿಗಳು: ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಗ್ರಾಮ, ಹೋಬಳಿವಾರು ಕುಡಿವ ನೀರಿನ ವಾಸ್ತವ ಪರಿಸ್ಥಿತಿಯ ಬಗ್ಗೆ ಸಮಗ್ರ ಅವಲೋಕಿಸಿದರು. ತಮ್ಮ ತಮ್ಮ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬೇಸಿಗೆ ನಿರ್ವಹಣೆಗೆ ಮಾಡಿಕೊಂಡ ಸಿದ್ಧತೆ ಬಗ್ಗೆ ಆಯಾ ಪಿಡಿಓಗಳು ಸಭೆಗೆ ವರದಿ ಒಪ್ಪಿಸಿದರು. ಸಭೆಯಲ್ಲಿ ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನಗೌಡ ತಲಮಾರಿ, ತಹಸೀಲ್ದಾರ ಸುರೇಶ ವರ್ಮಾ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ಅರಣ್ಯ ಸಂರಕ್ಷಣಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕುಮಟ್ಟದ ಅಧಿಕಾ-ರಿಗಳು, ವಿವಿಧ ಗ್ರಾಮ ಪಂಚಾಯತಗಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರು.

# ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದ ಪ್ರಾದೇಶಿಕ ಆಯುಕ್ತರು

ನೈಜ್ಯ ದೆಸೆ ನ್ಯೂಸ್

ರಾಯಚೂರು ಫೆಬ್ರವರಿ 12 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದರು.

ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಈಗಿನ ಮಹಾನಗರ ಪಾಲಿಕೆಯ ಕಚೇರಿಯ ಕೋರ್ಟ ಹಾಲನಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಆಯುಕ್ತರು, ರಾಯಚೂರು ಸಿಟಿ ಜನತೆಗೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಸೇರಿದಂತೆ ಯಾವುದೇ ರೀತಿಯ ಮೂಲಭೂತ ಸೌಕರ್ಯ ಕಾರ್ಯವು ಇನ್ಮುಂದೆ ಸಹ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.




ರಾಯಚೂರು ಮಹಾನಗರ ಪಾಲಿಕೆಯಿಂದ ಸಿಟಿಯಲ್ಲಿ ಈಗ ನಡೆಯುತ್ತಿರುವ ಸ್ವಚ್ಛತಾ ಕಾರ್ಯಗಳು ಮತ್ತು ನಗರ ಸೌಂದರ್ಯೀಕರಣ ಕಾರ್ಯಗಳನ್ನು ಯಥ-ಾವತ್ತು ಮುಂದುವರೆಸಬೇಕು. ಸುಗಮ ಸಂಚಾರಕ್ಕೆ ತೊಂದರೆಯಾಗದ ರೀತಿಯಲ್ಲಿ ಸಿಟಿಯಲ್ಲಿನ ಎಲ್ಲ ಕಡೆಗೆ ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಡುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಸಿಟಿಯಲ್ಲಿ ಒಟ್ಟು 35 ವಾರ್ಡಗಳಿದ್ದು, ಕೃಷ್ಣಾ ಮತ್ತು ತುಂಗಭದ್ರಾ ನದಿಗಳು ನಗರದಿಂದ 20 ರಿಂದ 30 ಕಿ.ಮೀ ದೂರದಲ್ಲಿವೆ. ಕೃಷ್ಣ ನದಿಯಿಂದ ಶೇ.80ರಷ್ಟು ಮತ್ತು ತುಂಗಭದ್ರಾ ನದಿಯಿಂದ ಶೇ.20 ಪ್ರಮಾಣದಷ್ಟು ನೀರು ಪಡೆಯಲಾಗುತ್ತಿದೆ. ಚಿಕ್ಕಸೂಗೂರನಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕ ಮತ್ತು ರಾಂಪೂರ ಬಳಿಯಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕದ ಮೂಲಕ ನದಿ ನೀರನ್ನು ಶುದ್ಧೀಕರಣಗೊಳಿಸಿ ನಗರಕ್ಕೆ ನೀರು ಪೂರೈಸಲಾಗುತ್ತಿದೆ. ರಾಯಚೂರು ಸಿಟಿಯಲ್ಲಿ ಒಟ್ಟು 650 ಕಿ.ಮೀ ರಸ್ತೆ ಜಾಲದ ವ್ಯವಸ್ಥೆಯಿದೆ. ಇತ್ತೀಚಿನ ಒಳಚರಂಡಿ ಜಾಲದ ಉದ್ದ 300 ಕಿ.ಮೀ ಇರುತ್ತದೆ. 73,000 ಮನೆಗಳು ಇರುತ್ತವೆ.

ಸಿಟಿಯಲ್ಲಿ ಇದುವರೆಗೆ 431 ಕಿ.ಮೀ ನಷ್ಟು ಒಳಚರಂಡಿ ಜಾಲದ ವ್ಯವಸ್ಥೆ ಇದ್ದು ಈ ಪೈಕಿ 300 ಕಿ.ಮೀ ಜಾಲ ಕಾರ್ಯನಿರ್ವಹಿಸುತ್ತಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಭೆಗೆ ವಿವರಿಸಿದರು. ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸೌಂದರ್ಯೀಕರಣಗೊಳಿಸಲು ಬೇಸಿಗೆ ಕಾಲದಲ್ಲಿ ತಾಪಮಾನವನ್ನು ನಿಯಂತ್ರಿಸಿ ಪರಿಸರದ ಸಮತೋಲನವನ್ನು ವಾಯು ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ವಿಶೇಷವಾಗಿ ವಾಯುಮಾಲಿನ್ಯ ನಿಯಂತ್ರಿಸಿ ನಗರವನ್ನು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರ ನೆಡುವುದು ಅವಶ್ಯವಿರುವ ಕಾರಣ 99.99 ಲಕ್ಷ ರೂ ವೆಚ್ಚದಲ್ಲಿ ಕಾಮಗಾರಿ ನಿರ್ವಹಿಸಲು ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸಿದ್ದು ಆಡಳಿತಾತ್ಮಕ ಅನುಮೋದನೆ ಪಡೆದು ಕಾರ್ಯಗತಗೊಳಿಸಲಾಗುವುದು ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇ-ರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

HAL ಇಂಡಿಯಾ ನೇಮಕಾತಿ 2026–151 ಫೈರ್‌ಮ್ಯಾನ್, ಡಿಪ್ಲೊಮಾ ತಂತ್ರಜ್ಞ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಊಂಐ ಇಂಡಿಯಾ ನೇಮಕಾತಿ 2026: 151 ಫೈರ್‌ಮ್ಯಾನ್, ಡಿಪ್ಲೊಮಾ ತಂತ್ರಜ್ಞ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಫೆಬ್ರವರಿ 2026 ರ HAL ಇಂಡಿಯಾ ಅಧಿಕೃತ ಅಧಿಸೂಚನೆಯ ಮೂಲಕ ಫೈರ್‌ಮ್ಯಾನ್, ಡಿಪ್ಲೊಮಾ ತಂತ್ರಜ್ಞ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25–ಫೆಬ್ರವರಿ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 11–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25–ಫೆಬ್ರವರಿ–2026 ಅಧಿಕೃತ ವೆಬ್‌ಸೈಟ್: hal-india.co.in

## ಲೇಬರ್ ಕೋಡ್ ಕಾರ್ಮಿಕರ ಹಕ್ಕುಗಳಿಗೆ ಮಾರಕ: ಶರ್ಪುದ್ದೀನ್ ಪೋತ್ನಾಳ ತಹಸೀಲ್ದಾರ್ ಮುಖಾಂತರ ಪ್ರಧಾನ ಮಂತ್ರಿಗಳಿಗೆ ಮನವಿ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಕೇಂದ್ರ ಸರ್ಕಾರ ಜಾರಿಗೊಳಿಸಿರುವ 4 ಲೇಬರ್ ಕೋಡ್‌ಗಳು ಕಾರ್ಮಿಕ ವರ್ಗದ ಹಕ್ಕುಗಳಿಗೆ ಮಾರಕವಾಗಿವೆ ಎಂದು ಸಿಐಟಿಯು ತಾಲೂಕು ಅಧ್ಯಕ್ಷರಾದ ಹೆಚ್. ಶರ್ಪುದ್ದೀನ್ ಪೋತ್ನಾಳ ಆರೋಪಿಸಿದರು.**

ಇಂದು ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಗ್ರೇಡ್ 2 ತಹಸೀಲ್ದಾರ್ ಅಬ್ದುಲ್ ವಾಹಿದ್ ಅವರ ಮುಖಾಂತರ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, 29 ಕಾರ್ಮಿಕ ಕಾಯ್ದೆಗಳನ್ನು ರದ್ದುಪಡಿಸಿ 4 ಸಂಹಿತೆಗಳ ರೂಪದಲ್ಲಿ ಜಾ–ರಿಗೊಳಿಸಿರುವ ಹೊಸ ನೀತಿ ಕಾರ್ಮಿಕರ ವೇತನ, ಇಎಸ್‌ಐ, ಪಿಎಫ್, ಗ್ರಾಚ್ಯುಟಿ ಸೇ–ರಿದಂತೆ ಹಕ್ಕುಗಳನ್ನು ಕುಂಠಿತಗೊಳಿಸುತ್ತಿದೆ ಎಂದು ಹೇಳಿದರು. ಕನಿಷ್ಠ ವೇತನ ಹೆಚ್ಚಳಕ್ಕೆ




ಸ್ಪಷ್ಟ ಭರವಸೆ ನೀಡದೇ ಕಾರ್ಮಿಕರನ್ನು ಅಸ್ಥಿರ ಉದ್ಯೋಗ ವ್ಯವಸ್ಥೆಗೆ ತಳ್ಳುವ ಪ್ರಯತ್ನ ನಡೆದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಇದಲ್ಲದೆ ನರೇಗಾ ಯೋಜನೆಯನ್ನು ದುರ್ಬಲಗೊಳಿಸುವುದು, ವಿದ್ಯುತ್ ಖಾಸಗೀಕರಣ, ಭೂಸ್ವಾಧೀನ ತಿದ್ದುಪಡಿ ಕಾಯ್ದೆಗಳ ಮೂಲಕ ರೈತರ ಹಿತಾಸಕ್ತಿಗೆ ಧಕ್ಕೆ ಉಂಟುಮಾಡಲಾಗುತ್ತಿದೆ. ಅಂಗನವಾಡಿ, ಬಿಸಿಯೂಟ, ಆಶಾ ಸೇ–ರಿದಂತೆ ಸ್ಕೀಮ್ ನೌಕರರನ್ನು ಖಾಯಂ ಮಾಡದೆ ಕಡಿಮೆ ಗೌರವಧನದಲ್ಲಿ ದುಡಿಸಿಕೊಳ್ಳುತ್ತಿರುವುದು ಅನ್ಯಾಯಕರವಾಗಿದೆ. ತಕ್ಷಣವೇ 4 ಲೇಬರ್ ಕೋಡ್‌ಗಳನ್ನು ಹಿಂಪಡೆದು, ಕಾರ್ಮಿಕ–ರೈತರ ಪರ ನೀತಿಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಐಟಿಯುಸಿ ಸಂಗಯ್ಯಸ್ವಾಮಿ ಚಿಂಚರಕಿ, ಎಐಟಿಯುಸಿ ಸಂಚಾಲಕರಾದ ಎಂ.ಬಿ. ಸಿದ್ರಾಮಯ್ಯಸ್ವಾಮಿ, ಎಐಯುಟಿಯುಸಿ ಜಿಲ್ಲಾ ಸಂಚಾಲಕರಾದ ಚನ್ನಬಸವ ಜಾನೇಕಲ್, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ರುದ್ರಪ್ಪ ನಾಯಕ, ಗ್ರಾ.ಪಂ. ನೌಕರರ ಸಂಘದ ಅಧ್ಯಕ್ಷ ಅಂಬಣ್ಣ ನಾಯಕ ಬ್ಯಾಗವಾಟ್, ಅಂಗನವಾಡಿ ನೌಕರರ ಸಂಘ ಅಧ್ಯಕ್ಷೆ ಕಾಂ. ಚನ್ನಮ್ಮ, ಬಿಸಿಯೂಟ ನೌಕರರ ಸಂಘ ಅಧ್ಯಕ್ಷೆ ಕಾಂ. ತೆರೇಸಾ ಪಟ್ಟದಕಲ್, ಕಟ್ಟಡ ಕಾರ್ಮಿಕರ ಸಂಘದ ಪ್ರ. ಕಾರ್ಯದರ್ಶಿ ಆಂಜನೇಯ್ಯ ಕೋಟೆ, ಸಿದ್ದಲಿಂಗಯ್ಯ, ಪಿ. ಲಕ್ಷ್ಮೀಭಾಯಿ ಪೆರಿಕಲ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಅನಧಿಕೃತ ವಸತಿ ಶಾಲೆ ವಿರುದ್ಧ ಸತ್ಯಾಗ್ರಹ: ಡಿಡಿಪಿಐ ಮನವೊಲಿಸಲು ವಿಫಲ

❑ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲೂಕಿನ ಢವಳಗಿ ಗ್ರಾಮದ ಮಡಿಕೇಶ್ವರ ರಸ್ತೆಯ ಪಕ್ಕದಲ್ಲಿ ಅನಧಿಕೃತ ವಸತಿ ನಿರ್ವಹಣೆ ಮಾಡುತ್ತಿರುವ "ವಿದ್ಯಾ ಸ್ಫೂರ್ತಿ" ಶಾಲೆಯ ಪರವಾನಗಿಯನ್ನು ರದ್ದುಪಡಿಸಬೇಕು ಹಾಗೂ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಯನ್ನು ಅಮಾನತು ಮಾಡಬೇಕು ಎಂದು ಪಟ್ಟಣದ ತಹಶೀಲ್ದಾರ ಕಚೇರಿಯ ಮುಂದೆ ನಡೆಯುತ್ತಿರುವ ಆಗ್ರಹಿಸಿ ನಡೆಯುತ್ತಿರುವ ಸತ್ಯಾಗ್ರಹ ಗುರುವಾರ ಮುಂದುವರಿದಿತು.**



ಬುದವಾರ ಪ್ರತಿಭಟನೆ ಸ್ಥಳಕ್ಕೆ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ (ಡಿಡಿಪಿಐ) ವೀರೇಶ ಸಾಲಿಮಠ ಭೇಟಿ ನೀಡಿ ಹೋರಾಟಗಾರರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಸಮಸ್ಯೆಯನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡುತ್ತಾ ಸತ್ಯಾಗ್ರಹ ಹಿಂಪಡೆಯುವಂತೆ ಮನವಿ ಮಾಡಿದರು ಎಂದು ತಿಳಿದುಬಂದಿದೆ. ಆದರೆ ಹೋರಾಟಗಾರರು ಯಾವುದೇ ತಾತ್ಕಾಲಿಕ ಭರವಸೆಗಳನ್ನು ಒಪ್ಪಲಿಲ್ಲ. ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಶಾಲೆಯ ಪರವಾನಗಿ ತಕ್ಷಣ ರದ್ದುಪಡಿಸಬೇಕು ಹಾಗೂ ಸಂಬಂಧಿತ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂಬ ತಮ್ಮ ಬೇಡಿಕೆಯನ್ನು ಸಂಪೂರ್ಣವಾಗಿ ಈಡೇರಿಸುವ ತನಕ ಹೋರಾಟ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದರು. ಹೋರಾಟಗಾರರು ಆರೋಪಿಸುವಂತೆ, ಸಂಬಂಧಿತ ವಸತಿ ಶಾಲೆ ಅಗತ್ಯ ಅನುಮತಿ ಮತ್ತು ನಿಯಮಗಳನ್ನು ಪಾಲಿಸದೇ ಕಾರ್ಯನಿರ್ವಹಿಸುತ್ತಿದ್ದು, ಇದರಿಂದ ವಿದ್ಯಾರ್ಥಿಗಳ ಭದ್ರತೆ ಮತ್ತು ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಬಂಧಿತ ಇಲಾಖೆಯವರು ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಚರ್ಚೆ ಫಲಕಾರಿಯಾಗದೆ ಹೋದ ಹಿನ್ನೆಲೆ, ಡಿಡಿಪಿಐ ಯಾವುದೇ ಸ್ಪಷ್ಟ ನಿರ್ಧಾರ ಪ್ರಕಟಿಸದೇ ಹಿಂದಿರುಗಿದ ಘಟನೆ ನಡೆದಿದೆ. ಇದರಿಂದಾಗಿ ಪ್ರತಿಭಟನೆ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಸತ್ಯಾಗ್ರಹದಲ್ಲಿ ವಿವಿಧ ಸಂಘಟನೆಗಳ ಮುಖಂಡರು, ಪೋಷಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಪ್ರತಿಭಟನಾಕಾರರು ತಹಶೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಸಮಸ್ಯೆ ಪರಿಷ್ಕಾರವಾಗುವವರೆಗೆ ಹೋರಾಟ ಮುಂದುವರಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಧರಣಿ ಸತ್ಯಾಗ್ರಹದಲ್ಲಿ ಡಿ.ಎಸ್.ಎಸ್. ಜಿಲ್ಲಾಧ್ಯಕ್ಷ ಬಾಲಚಂದ್ರ ಹಲ್ಲೂರ ,ಬ ಬಾಗೇವಾಡಿ ಘಟಕದ ಅಧ್ಯಕ್ಷರಾದ ಸುರೇಶ ದೊಡಮನಿ ಮಾರುತಿ ಸಿದ್ದಾಪೂರ, ಡಿಎಸ್‌ಎಸ್ ರಾಜ್ಯ ಮುಖಂಡ ದುರಗೆಪ್ಪ ದೊಡಮನಿ, ಶೇಖರ ಜಟ್ಟಗಿ, ಪರಸುರಾಮ ಹೊಲಮನಿ,ಸುರೇಶ ದೊಡಮನಿ,ಹನುಮಂತ ದೊಡಮನಿ, ಮುದುಕಪ್ಪ ದೊಂಕಮಡು, ಪ್ರಕಾಶ ಹಾದಿಮನಿ, ಬೀಮರಾವ ಹಲ್ಲೂರ, ಸಂಗಮೇಶ ಢವಳಗಿ, ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

## ಬೂದಿಹಾಳ ಸ.ಹಿ.ಮಾ.ಪ್ರಾ.ಶಾಲೆಯ ಮಕ್ಕಳಲ್ಲಿ ಜಂತು ನಿವಾರಣಾ ಕಾರ್ಯಕ್ರಮ.

❑ ನೈಜ್ಯ ದೆಸೆ ನ್ಯೂಸ್

**ಕೋಡೇಕಲ್: ಹಗರಟಗಿ ಉಪಕೇಂದ್ರದ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳಾದ ಶ್ರೀ ಮುಜಾಹಿದ ನಮಾಜಕಟ್ಟಿ ಅವರು ಜಂತುಗಳ ನಿರ್ವಹಣಾ (ಡಿ–ವರ್ಮಿಂಗ್) ಕಾರ್ಯಕ್ರಮದ (10 ರಿಂದ 16 ಫೆ.) ಅಂಗವಾಗಿ ಸ್ಥಳೀಯ ಬೂದಿಹಾಳ ಸ.ಹಿ.ಮಾ.ಪ್ರಾ.ಶಾಲೆಯ ಮಕ್ಕಳಿಗೆ ಅಲ್ಬೆಂಡೋಸಲ್ ಮಾತ್ರೆಗಳನ್ನು ವಿತರಿಸಿ ಜಾಗೃತಿ ಮೂಡಿಸಿದರು.**

ಕಾರ್ಯಕ್ರಮದ ವೇಳೆ ಅವರು



ವಿದ್ಯಾರ್ಥಿಗಳಿಗೆ ಜಂತುಗಳಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳ ಬಗ್ಗೆ ತಿಳಿಸಿ, ಸ್ವಚ್ಛತೆ ಪಾಲನೆಯ ಮಹತ್ವವನ್ನು ವಿವರಿಸಿದರು. ಅಶುದ್ಧ ಆಹಾರ ಸೇವನೆ, ಕೈ ತೊಳೆಯದಿರುವುದು ಮತ್ತು ಅಸ್ವಚ್ಛ ಪರಿಸರದಿಂದ ಜಂತು ಸಮಸ್ಯೆಗಳು ಉಂಟಾಗುತ್ತವೆ ಎಂದು ತಿಳಿಸಿ, ನಿಯಮಿತವಾಗಿ ಕೈ ತೊಳೆಯುವುದು, ಸ್ವಚ್ಛ ನೀರು ಕುಡಿಯುವುದು ಮತ್ತು ಶೌಚಾಲಯದ ಬಳಕೆ ಮಾಡುವುದು ಅತ್ಯಂತ ಮುಖ್ಯವೆಂದು ಹೇಳಿದರು. ಅಲ್ಬೆಂಡ್ರೋಸಲ್ ಮಾತ್ರೆಗಳನ್ನು ಆರೋಗ್ಯ ಇಲಾಖೆಯ ಮಾರ್ಗಸೂಚಿಗಳಂತೆ ಮಕ್ಕಳಿಗೆ ನೀಡಲಾಯಿತು.

ಮುಖ್ಯ ಗುರುಗಳಾದ ಶ್ರೀ ರವಿಕುಮಾರ ದೇಸಾಯಿ ಆಶಾ ಕಾರ್ಯಕರ್ತೆಯರಾದ ಶ್ರೀಮತಿ ಬಸ್ಸಮ್ಮ ಹಾಗೂ ಶಿಕ್ಷಕರು ಮತ್ತು ಆರೋಗ್ಯ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಹಕಾರ ನೀಡಿದರು. ಈ ಕಾರ್ಯಕ್ರಮವು ಮಕ್ಕಳ ಆರೋಗ್ಯ ರಕ್ಷಣೆ ಮತ್ತು ಉತ್ತಮ ಪೌಷ್ಠಿಕ ಸ್ಥಿತಿಗಾಗಿ ಆರೋಗ್ಯ ಇಲಾಖೆಯ ಮಹತ್ವದ ಹೆಜ್ಜೆಯಾಗಿದ್ದು, ಪೋಷಕರು ಸಹ ಈ ಕುರಿತು ಜಾಗೃತರಾಗಿರಬೇಕು ಹಾಗೂ 1 ರಿಂದ 19 ವರ್ಷದವರೆಲ್ಲರೂ ಈ ಮಾತ್ರೆಯನ್ನು ಸೇವಿಸಬೇಕೆಂದು ಅಧಿಕಾರಿಗಳು ಮನವಿ ಮಾಡಿದರು.

## ಚೌಡಯ್ಯನವರ ಪ್ರತಿಮೆ ಅನಾವರಣ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಫೆಬ್ರವರಿ 15ರಂದು ನಡೆಲಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಅನಾವರಣ ನೂತನ ಸಭಾ ಭವನ ಉದ್ಘಾಟನೆ ಹಾಗೂ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ಅನುಭವ ಮಂಟಪದ ಶಂಕುಸ್ಥಾಪನೆ ಕಾರ್ಯಕ್ರಮದ ಪೋಸ್ಟರನ್ನು ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಬಿಡುಗಡೆಗೊಳಿಸಿದರು.**

ಗುರುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯ ಸಮಾಜದ ತಾಲೂಕ ಘಟಕದ




ವತಿಯಿಂದ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿ ಫೆಬ್ರವರಿ 15ರಂದು ಪಟ್ಟಣದಲ್ಲಿ ಶ್ರೀ ಅಂಬಿಗರ ಚೌಡಯ್ಯನವರ ಪ್ರತಿಮೆ ಅನಾವರಣ ಹಾಗೂ ವಿವಿಧ ಕಾರ್ಯಕ್ರಮಗಳು ನಡೆಯಲಿರುವುದು ಸಂತೋಷದ ವಿಷಯ ಇದರಲ್ಲಿ ನಾನೂ ಭಾಗವಹಿಸುತ್ತೇನೆ ಕಾರ್ಯಕ್ರಮದ ಯಶಸ್ವಿಗೆ ಎಲ್ಲರೂ ಸಹಕರಿಸಿ ಎಂದರು. ಈ ಸಂದರ್ಭದಲ್ಲಿ ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ ತಂಗಡಗಿ, ಜೆಡಿಎಸ್ ಜಿಲ್ಲಾಧ್ಯಕ್ಷ ಬಸನಗೌಡ ಮಾಡಗಿ, ತಾಲೂಕ ಅಧ್ಯಕ್ಷ ಮಡು ಸಾಹುಕಾರ ಬಿರಾದಾರ,

ಅಂಬಿಗರ ಸಮಾಜದ ಪ್ರಮುಖರಾದ ಬಾಲು ಅಸ್ಕಿ, ಎಂ.ಹೆಚ್.ಜೋಲಿ, ಶಶಿಕಾಂತ ಮೂಕಿಹಾಳ,ರಮೇಶ ಮೂಕಿಹಾಳ, ಬಸವರಾಜ ಯಡಹಳ್ಳಿ, ಮಾನಪ್ಪ ನಾಯ್ಕೋಡಿ, ಭೀಮಣ್ಣ ಚಳ್ಳಗಿ, ಸಂಗಮೇಶ ಚಳ್ಳಗಿ, ಬಸವರಾಜ ತಳವಾರ, ಮಲ್ಲಿಕಾರ್ಜುನ ನಾಟೀಕಾರ, ಕಾಶಿನಾಥ ಮದರಿ, ಭೀಮಣ್ಣ ತಳವಾರ, ಮಲ್ಲಿಕಾರ್ಜುನ ನಾಯ್ಕೋಡಿ ಮತ್ತಿತರರು ಇದ್ದರು.

## ಹೆಗ್ಗಡದಿನ್ನಿ ಗ್ರಾಮದಲ್ಲಿ ಎತ್ತುಗಳು ಬಾರ ಎಳೆಯುವ ಸ್ಪರ್ಧೆ. ಗ್ರಾಮೀಣ ಪರಂಪರೆ ಉಳಿಸಿಕೊಳ್ಳಿ–ಕಲಿಗಣನಾಥ ಸ್ವಾಮಿ





❑ ನೈಜ್ಯ ದೆಸೆ ನ್ಯೂಸ್

**ಅರಕೇರಾ: ಇಂದಿನ ಆಧುನಿಕ ಯುಗದಲ್ಲಿ ಗ್ರಾಮೀಣ ಸೊಗಡಿನ ಆಚರಣೆ ಹಾಗೂ** ಪರಂಪರೆಯ ಉಳಿವಿಗೆ ಪ್ರತಿಯೊಬ್ಬರ ಸಹಕಾರ ನೀಡಬೇಕು ಎಂದು ವೇ. ಮೂ. ಕಲಿಗಣನಾಥ ಸ್ವಾಮಿ ಹೇಳಿದರು. ತಾಲ್ಲೂಕಿನ ಹೆಗ್ಗಡದಿನ್ನಿ ಗ್ರಾಮದಲ್ಲಿ ವೀರಭದ್ರ ಸ್ವಾಮಿಗಳ ಜಾತ್ರೆಯ ಅಂಗವಾಗಿ ಮಂಗಳವಾರ ಆಯೋಜಿಸಿದ್ದ ಎತ್ತುಗಳು ಬಾರ ಎಳೆಯುವ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು.

ಇದೊಂದು ರೈತರ ಹಬ್ಬವಾಗಿದ್ದು ,ತಮ್ಮ ಎತ್ತುಗಳ ಪ್ರದರ್ಶನ ಹಾಗೂ ಸಾಮಥ–ರ್ಥ್ಯ ಇಲ್ಲಿ ಅನಾವರಣ ಮಾಡಲು ಉತ್ತಮ ಅವಕಾಶವಿದೆ. ಪೂರ್ವಜರ ಕಾಲದ ಆಚರಣೆ, ವಿಚಾರಗಳನ್ನು ಯುವ ಪೀಳಿಗೆಗೆ ಪರಿಚಯಿಸಲು ಆಗಾಗ್ಗೆ ಇಂತಹ ಸ್ಪರ್ಧೆಗಳನ್ನು ಆಯೋಜಿಸಿಬೇಕು ಇದರಿಂದ ನಮ್ಮ ನೆಲದ ಸಂಸ್ಕೃತಿ ಗೌರವ ಹೆಚ್ಚುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗೆದ್ದಿರುವ ಅಂತಹ ಎತ್ತುಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮ ನೆರವೇರಿತು ಪ್ರಥಮ ಬಹುಮಾನ 21,000 ರವಿ ಗೌಡ ಮಾತ್ವಳ್ಳಿ, ದ್ವಿತೀಯ ಬಹುಮಾನ 15,000 ತಾಯಪ್ಪ ಇರಬಿಗೇರ ತೃತೀಯ ಬಹುಮಾನ 10,000 ರಂಗನಾಥ್ ಇರಬಿಗೇರ ಚತುರ್ಥಿ ಬಹುಮಾನ ನವಕಲ್ಲು ಕಿಚ್ಚ ಬಾಯ್ಸ್ 5,000 ಈ ರೀತಿಯಾಗಿ ಪೂಜ್ಯಶ್ರೀಗಳಿಂದ ಬಹುಮಾನಗಳನ್ನು ವಿತರಿಸಲಾಯಿತು.

ಈ ವೇಳೆಯಲ್ಲಿ ಬಸವರಾಜ್ ಪೂಜಾರಿ ಅರಕೇರಾ, ಹನುಮಂತರಾಯ ಆಕಳ ಕುಂಪಿ, ಶೇಖರಪ್ಪ ಗೌಡ ಅರಕೇರಾ, ಪಶುಆಧಿಕಾರಿ ಇಮಾಮ್ ಸಾಬ್, ಹುಸ್ಮಾನ್ ಅಲ್ಲಿ,ಕಲ್ಲು ತುಂಡಿನ ಅಧ್ಯಕ್ಷರು ರಾದ ರವಿಗೌಡ ಮಾತ್ವಳ್ಳಿ, ನಿರ್ಣಯಾಕರಾದ ಹನುಮಂತರಾಯ ಜಿ, ಶರಣಬಸವ ಕಾನಪುರ್, ಗ್ರಾಮದ ಮುಖಂಡರು ಗುರುಹಿ–ರಿಯರು ಹಾಗೂ ಕಲ್ಲು ತುಂಡು ಕಮಿಟಿಯ ಊರಿನ ಎಲ್ಲಾ ಸದಸ್ಯರು ಭಾಗಿಯಾಗಿದ್ದರು.

## ಕಲ್ಮಠ ಗಾರಿಗೆ ಜಾತ್ರೆಯಲ್ಲಿ ಜಿಲ್ಲಾ ಮಟ್ಟದ ರೈತ ಸಮಾವೇಶ ರೈತನೇ ದೇಶದ ಅಣ್ಣದಾತ :ಡಾ. ಎ.ಆರ್. ಕುರುಬರ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ಕಲ್ಮಠ ಗಾರಿಗೆ ಜಾತ್ರೆ ಅಂಗವಾಗಿ ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ ರಾಯಚೂರು, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕ ಮಾಧ್ಯಮ ಸಮಿತಿ ವತಿಯಿಂದ ಹಮ್ಮಿಕೊಂಡ ಜಿಲ್ಲಾ ಮಟ್ಟದ ರೈತ ಸಮಾವೇಶವನ್ನು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ. ಎ.ಆರ್. ಕುರುಬರ ಉದ್ಘಾಟಿಸಿದರು.**

ದೇಶದ 140 ಕೋಟಿ ಜನರು ತಮ್ಮ ನಿತ್ಯದ ಆಹಾರಕ್ಕಾಗಿ ರೈತನನ್ನೇ ಅವಲಂಬಿಸಿದ್ದಾರೆ. ಅನ್ನದಾತನಾದ ರೈತನನ್ನು ದೇವರ ಸ್ವರೂಪದಂತೆ ಸ್ಮರಿಸಬೇಕು ಎಂದು ಅವರು ಹೇಳಿದರು. ರೈತರು ಯಶಸ್ವಿ ಕೃಷಿಕರ ಜಮೀನುಗಳಿಗೆ ಕುಟುಂಬ ಸಮೇತ ಭೇಟಿ ನೀಡಿ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡಾಗ ಮಾತ್ರ ಸಂಕಷ್ಟಗಳಿಂದ ಹೊರಬಂದು ಲಾಭದಾಯಕ ಕೃಷಿ ಸಾಧ್ಯವಾಗುತ್ತದೆ ಎಂದರು. ಭತ್ತದ ನಂತರ ಎಳ್ಳು ಮತ್ತು ಸಾಸಿವೆ ಬೆಳೆ ಪದ್ಧತಿಯನ್ನು ಜಿಲ್ಲೆಯ 200 ಎಕರೆ ಪ್ರದೇಶದಲ್ಲಿ ಪರಿಚಯಿಸಿದ್ದು, ಕಡಿಮೆ ವೆಚ್ಚದಲ್ಲಿ ಹೆಚ್ಚು ಲಾಭ ಪಡೆಯುತ್ತಿರುವುದಾಗಿ ತಿಳಿಸಿದರು.

ತಾಳೆ ಬೆಳೆಗೆ ಕೇಂದ್ರ ಸರ್ಕಾರ ನಿಗದಿ ಬೆಲೆ ಘೋಷಿಸಿರುವುದರಿಂದ ರೈತರು ಅದನ್ನು ಬೆಳೆಯಬಹುದು ಎಂದು ಸಲಹೆ ನೀಡಿದರು. ಭೂಮಿಯ ಆರೋಗ್ಯ ಕಾಪಾಡಿದರೆ ಮಾತ್ರ ಉತ್ತಮ ಆರೋಗ್ಯ ಮತ್ತು ಗುಣಮಟ್ಟದ




ಆಹಾರ ಉತ್ಪಾದನೆ ಸಾಧ್ಯ ಎಂದು ಹೇಳಿದರು. ಕೃಷಿ ವಸ್ತು ಪ್ರದರ್ಶನ ಮಳಿಗೆಗಳನ್ನು ಉದ್ಘಾಟಿಸಿದ ಜಿಲ್ಲಾ ಕೃಷಿ ಜಂಟಿ ನಿರ್ದೇಶಕರಾದ ಪ್ರಕಾಶ್ ಆರ್. ಚೌಹಾಣ್ ಮಾತನಾಡಿ, ಸರ್ಕಾರದ ಯೋಜನೆಗಳು ಹಾಗೂ ಸಹಾಯಧನ ಸೌಲಭ್ಯಗಳನ್ನು ರೈತರು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು. ಕಲ್ಮಠದ ಪೀಠಾಧ್ಯಕ್ಷರಾದ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಗಾರಿಗೆ ಜಾತ್ರೆಯ ಅಂಗವಾಗಿ ಜಿಲ್ಲೆಯ ರೈತರಿಗೆ ಆಧುನಿಕ ಕೃಷಿ ಮಾಹಿತಿಯನ್ನು ನೀಡುವ ಉದ್ದೇಶದಿಂದ ಸಮಾವೇಶ ಆಯೋಜಿಸಲಾಗಿದೆ ಎಂದರು.

ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಸದಾಶಿವ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದರು. ಕಲ್ಮಠ ಶ್ರೀ ವಿರೂಪಾಕ್ಷೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ವತಿಯಿಂದ ಹಮ್ಮಿಕೊಂಡ ಉಚಿತ ಆರೋಗ್ಯ ಶಿಬಿರವನ್ನು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಚಾಲನೆ ನೀಡಿ, ಕಂದಾಯ ಇಲಾಖೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಸಮಾವೇಶದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್ ಬೆಟ್ಟದೂರು ವಹಿಸಿಕೊಂಡು, ಸಂಪ್ರದಾಯಿಕ ಬೆಳೆ ಪದ್ಧತಿಯ ಜೊತೆಗೆ ಗ್ಯಾರಂಟಿ ಆದಾಯ ನೀಡುವ ಬೆಳೆ ಮಾದರಿಗಳನ್ನು










ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮಂಡ್ಯದ ಸಾವಯವ ರೈತ ಕೃಷ್ಣಪ್ಪ ಬೆನ್ನೂರು ಪಂಚತರಣ್ಗಿಣಿ ಐದು ಹಂತಗಳ ಕೃಷಿ ಪದ್ಧತಿ ಕುರಿತು ವಿವರಿಸಿದರು. ಹಿರಿಯ ಪರಿಸರ ಅಂಕಣಕಾರ ಅಮರೇಗೌಡ ಗೋನಾವರ ತುಂಗಭದ್ರ ಜಲಾಶಯ ಹಾಗೂ ನೀರಿನ ಸಮರ್ಪಕ ಬಳಕೆ ಕು–ರಿತು ಉಪನ್ಯಾಸ ನೀಡಿದರು. ಕೃಷಿ ವಿಜ್ಞಾನಿಗಳಾದ ಡಾ. ಪ್ರಭುರಾಜ್ ಎ., ಡಾ. ಎಂ.ಎ. ಬಸವಣ್ಣೆಪ್ಪ, ಡಾ. ತಿಮ್ಮಣ್ಣ ಹಾಗೂ ಇತರರು ಇ–ಸ್ಯಾಪ್ ತಂತ್ರಜ್ಞಾನ, ಸಾವಯವ ಕೃಷಿ ಮತ್ತು ಮನೆಯಂಗಳ ತೋಟ ಕುರಿತು ಮಾಹಿತಿ ನೀಡಿದರು. ವಿವಿಧ ತಾಲೂಕುಗಳ ಕೃಷಿ ಕ್ಷೇತ್ರ ಸಾಧಕರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ. ಜೀವನೇಶ್ವರಯ್ಯ, ಟಿ.ಎ.ಪಿ.ಸಿ.ಎಂ.ಸಿ ಅಧ್ಯಕ್ಷ ತಿಮ್ಮರೆಡ್ಡಿ ಭೋಗವತಿ, ಸಹಾಯಕ ಕೃಷಿ ನಿರ್ದೇಶಕ ಗುರುನಾಥ ಭೂಸನೂರ, ಮಹಾಸಭಾ ಜಿಲ್ಲಾಧ್ಯಕ್ಷ ಚಂದ್ರಶೇಖರ ಮಿರ್ಜಾಪುರ ಸೇರಿದಂತೆ ಅನೇಕ ಗಣ್ಯರು ಮತ್ತು ರೈತರು ಭಾಗವಹಿಸಿದರು. ಮಯೂರಿ ನೃತ್ಯ ಕಲಾ ತಂಡದ ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ ನಡೆಯಿತು. ಕೃಷಿ ಇಲಾಖೆ, ಬಸವ ಕೈಗಾರಿಕಾ ಸಂಸ್ಥೆ, ಸ್ಟೆಪ್ಪಿಂಗ್ ಸ್ಟೋನ್ ಶಿಕ್ಷಣ ಸಂಸ್ಥೆ ಸೇರಿದಂತೆ ವಿವಿಧ ಸಂಸ್ಥೆಗಳ ಕೃಷಿ ವಸ್ತು ಪ್ರದರ್ಶನ ರೈತರ ಗಮನ ಸೆಳೆದಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# BSc LLB

BSc LLB (Bachelor of Science + Bachelor of Laws) ಎಂಬುದು ವಿಜ್ಞಾನ ಮತ್ತು ಕಾನೂನು ವಿಷಯಗಳನ್ನು ಸಂಯೋಜಿಸುವ 5 ವರ್ಷಗಳ ಸಮಗ್ರ ಪದವಿಪೂರ್ವ (Integrated) ಕೋರ್ಸ್ ಆಗಿದೆ. ಬಿಎಸ್ಸಿ ಎಲ್‌ಎಲ್ಬಿ ಪೂರ್ಣ ರೂಪವು ಬ್ಯಾಚುಲರ್ ಆಫ್ ಸೈನ್ಸ್ ಮತ್ತು ಬ್ಯಾಚುಲರ್ ಆಫ್ ಲೆಜಿಸ್ಲೇಟಿವ್ ಲಾ ಆಗಿದೆ , ಇದು 5 ವರ್ಷಗಳ ಅವಧಿಯ ಸಂಯೋಜಿತ ಕಾನೂನು ಕೋರ್ಸ್ ಆಗಿದ್ದು, ಇದು 2 ಪದವಿ ಕೋರ್ಸ್‌ಗಳನ್ನು ಒಂದೇ ಕಾರ್ಯಕ್ರಮಕ್ಕೆ ಸಂಂ–ಯೋಜಿಸುತ್ತದೆ. ಬಿಎಸ್ಸಿ ಎಲ್‌ಎಲ್ಬಿ ಅಡಿಯಲ್ಲಿ, ವಿದ್ಯಾರ್ಥಿಗಳು ವೈಜ್ಞಾನಿಕ ಕ್ಷೇತ್ರಗಳ (ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಅಥವಾ ಜೈವಿಕ ತಂತ್ರಜ್ಞಾನದಂತಹ) ಮತ್ತು ಕಾನೂನು ತತ್ವಗಳೆರಡರ ಬಗ್ಗೆಯೂ ಜ್ಞಾನವನ್ನು ಪಡೆಯುತ್ತಾರೆ. ಬಿಎಸ್ಸಿ ಎಲ್‌ಎಲ್ಬಿ ಕೋರ್ಸ್ ಎರಡೂ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ವಿಶಿಷ್ಟ ಮತ್ತು ಸಹಾಯಕವಾದ ಮಾರ್ಗಗಳನ್ನು ನೀಡುತ್ತದೆ ಮತ್ತು ಪರಿಸರ ಕಾನೂನಿನಂತಹ ಕ್ಷೇತ್ರಗಳಲ್ಲಿ ವೃತ್ತಿ ಅವಕಾಶಗಳನ್ನು ಅನ್ವೇಷಿಸಲು ಅವರಿಗೆ ಸಹಾಯ ಮಾಡುತ್ತದೆ. ಆಸಕ್ತ ವಿದ್ಯಾರ್ಥಿಗಳು ಬಿಎಸ್ಸಿ ಎಲ್–ಎಲ್ಬಿ ಕೋರ್ಸ್‌ನ ಪ್ರಮುಖ ಅಂಶಗಳನ್ನು ಹೈಲೈಟ್ ಮಾಡುವ ಕೆಳಗಿನ ಕೋಷ್ಟಕವನ್ನು ನೋಡಬಹುದು –ಇದು 12ನೇ ತರಗತಿಯ ನಂತರ (ಜ್ಞಾನ ವಿಭಾಗ) ನೇರವಾಗಿ ಪ್ರವೇಶ ಪಡೆಯಬಹುದಾದ, ಪರಿಸರ ಕಾನೂನು, ಫೋರೆನ್ಸಿಕ್ ಮತ್ತು ಬೌದ್ಧಿಕ ಆಸ್ತಿ ಹಕ್ಕುಗಳ ಮೇಲೆ ಕೇಂದ್ರೀಕರಿಸುವ ವೃತ್ತಿಪರ ಪದವಿಯಾಗಿದೆ. Shiksha.com Shiksha.com+2 BSc LLB ಕೋರ್ಸ್ ವಿವರಗಳು: ಅವಧಿ: 5 ವರ್ಷಗಳು (10 ಸೆಮಿಸ್ಟರ್‌ಗಳು). ಅರ್ಹತೆ: ವಿಜ್ಞಾನ ವಿಷಯಗಳಲ್ಲಿ (PCM/PCB) ಕನಿಷ್ಠ 45%–50% ಅಂಕಗಳೊಂದಿಗೆ 10+2 (PUC) ಉತ್ತೀರ್ಣರಾಗಿರಬೇಕು. SC/ST ಅಭ್ಯರ್ಥಿಗಳಿಗೆ ಸಡಿಲಿಕೆ ಇರುತ್ತದೆ. ಪ್ರವೇಶ ಪರೀಕ್ಷೆಗಳು: CLAT, LSAT, AILET, DU LLB, ಮತ್ತು ರಾಜ್ಯ ಮಟ್ಟದ LAWCET ಪರೀಕ್ಷೆಗಳ ಮೂಲಕ ಪ್ರವೇಶ ಪಡೆಯಬಹುದು. ಪಠ್ಯಕ್ರಮ: ಸಿವಿಲ್ ಕಾನೂನು, ಕ್ರಿಮಿನಲ್ ಕಾನೂನು, ಕಾರ್ಪೊರೇಟ್ ಕಾನೂನು, ಬೌದ್ಧಿಕ ಆಸ್ತಿ ಹಕ್ಕುಗಳು, ಪರಿಸರ ಕಾನೂನು, ಮತ್ತು ವಿಜ್ಞಾನ ಸಂಬಂಧಿತ ವಿಷಯಗಳು (ಜೈವಿಕ ತಂತ್ರಜ್ಞಾನ, ರಸಾಯನಶಾಸ್ತ್ರ). ಉದ್ಯೋಗಾವಕಾಶಗಳು: ಕಾರ್ಪೊರೇಟ್ ವಕೀಲರು, ಕಾನೂನು ಸಲಹೆಗಾರರು, ಫೋರೆನ್ಸಿಕ್ ತಜ್ಞರು, ಪೇಟೆಂಟ್ ವಕೀಲರು, ಮತ್ತು ಪರಿಸರ ವಕೀಲರಾಗಿ ಕೆಲಸ ಮಾಡಬಹುದು.

# ಬಾಂಗ್ಲಾ ಚುನಾವಣೆ ಹೊತ್ತಲ್ಲೇ ಮತ್ತೊಬ್ಬ ಹಿಂದೂ ವ್ಯಕ್ತಿಯ ಹತ್ಯೆ

ನೈಜ್ಯ ದೆಸೆ ನ್ಯೂಸ್

**ಢಾಕಾ: ಬಾಂಗ್ಲಾದೇಶ ದಲ್ಲಿ ಸಾರ್ವತ್ರಿಕ ಚುನಾವಣೆ ನಡೆಯುತ್ತಿರುವ ಸಂದರ್ಭದಲ್ಲೇ ಮತ್ತೊಬ್ಬ ಹಿಂದೂ ವ್ಯಕ್ತಿಯನ್ನು ಹತ್ಯೆ ಮಾಡಲಾಗಿದೆ.ಬಾಂಗ್ಲಾದೇಶದ ಮೌಲ್ವಿಬಜಾರ್ ಜಿಲ್ಲೆಯಲ್ಲಿ ಉದ್ವಿಗ್ನತೆ ಭುಗಿ ಲೆದ್ದಿದ್ದು, ನಿನ್ನೆ 28 ವರ್ಷದ ಹಿಂದೂ ವ್ಯಕ್ತಿಯೊಬ್ಬನನ್ನು ಕ್ರೂರವಾಗಿ ಹತ್ಯೆ ಮಾಡಲಾಗಿದೆ.**




ಕೈಕಾಲುಗಳನ್ನು ಕಟ್ಟಿಹಾಕಿದ ಸ್ಥಿತಿಯಲ್ಲಿ ಆತನ ದೇಹವು ಪತ್ತೆಯಾಗಿದ್ದು, ಅಲ್ಪಸಂಖ್ಯಾತರ ಸುರಕ್ಷತೆಯ ಬಗ್ಗೆ ಮತ್ತೆ ಆತಂಕ ಮೂಡಿಸಿದೆ. ಮೃತರನ್ನು ರತನ್ ಸಾಹುಕರ್ ಎಂದು ಗುರುತಿಸ ಲಾಗಿದೆ. ರತನ್ ಚಂಪಾ ಪ್ರದೇಶದ ಚಹಾ ತೋಟಗಳಲ್ಲಿ ಕೆಲಸ ಮಾಡುತ್ತಿದ್ದರು. ನಿನ್ನೆ ಬೆಳಗ್ಗೆ 10 ಗಂಟೆ ಸುಮಾರಿಗೆ ಅವರ ಶವ ಪತ್ತೆಯಾಗಿದೆ. ಶವ ಪತ್ತೆಯಾದಾಗ, ರತನ್ ಅವರ ಕೈ ಮತ್ತು ಕಾಲುಗಳನ್ನು ಕಟ್ಟಿಹಾಕಲಾಗಿತ್ತು ಮತ್ತು ಅವರ ದೇಹದಲ್ಲಿ ತೀವ್ರ ಗಾಯಗಳಾಗಿದ್ದವು, ಅದರಿಂದ ವಿಪರೀತ ರಕ್ತಸ್ರಾವವಾಗುತ್ತಿತ್ತು ಎನ್ನಲಾಗಿದೆ. ರತನ್ ಜೊತೆ ಕೆಲಸ ಮಾಡುತ್ತಿದ್ದ ಕಾರ್ಮಿಕರು ಇದು ಪೂರ್ವನಿಯೋಜಿತ ಕೊಲೆ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಅವರ ಕೈಕಾಲುಗಳನ್ನು ಕಟ್ಟಲಾಗಿದ್ದ ರೀತಿ ಮತ್ತು ಅವರ ದೇಹದ ಮೇಲಿನ ಗಾಯಗಳು ಇದು ಅಪಘಾತವಲ್ಲ.ಬದಲಾಗಿ ಪಿತೂರಿ ಎಂಬುದನ್ನು ಸ್ಪಷ್ಟವಾಗಿ ಸೂಚಿಸುತ್ತವೆ ಎಂದು ಅವರು ಹೇಳಿದ್ದಾರೆ. ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದು, ಕೊಲೆ ಚುನಾವಣೆಗೆ ಸಂಬಂಧಿಸಿದೆಯೇ ಅಥವಾ ಬೇರೆ ಯಾವುದಾದರೂ ಉದ್ದೇಶವಿದೆಯೇ ಎಂದು ನಿರ್ಧ–ರಿಸಲು ಪ್ರಯತ್ನಿಸುತ್ತಿದ್ದಾರೆ. ಈ ಸಮಯದಲ್ಲಿ ಪೊಲೀಸರು ಯಾವುದೇ ಅಧಿಕೃತ ಹೇಳಿಕೆಯನ್ನು ನೀಡಿಲ್ಲ.ಇದೊಂದೇ ಘಟನೆಯಲ್ಲ. ಕೆಲವು ದಿನಗಳ ಹಿಂದೆ,ಮೈಮೆನ್ಸಿಂಗ್ ಜಿಲ್ಲೆಯಲ್ಲಿ ಮತ್ತೊಬ್ಬ ಹಿಂದೂ ಉದ್ಯಮಿ ಸುಶೇನ್ ಚಂದ್ರ ಸರ್ಕಾರ್ (62) ಅವರನ್ನು ಕ್ರೂರವಾಗಿ ಹತ್ಯೆ ಮಾಡಲಾಗಿತ್ತು ಸುಶೇನ್ ಅಕ್ಕಿ ವ್ಯಾಪಾರ ಮಾಡುತ್ತಿದ್ದರು. ಶೇಖ್ ಹಸೀನಾ ಅವರ 15 ವರ್ಷಗಳ ಆಡಳಿತ ಕೊನೆಗೊಂಡ 18 ತಿಂಗಳ ನಂತರ ಈ ಚುನಾವಣೆಗಳು ನಡೆಯುತ್ತಿವೆ.ಪ್ರಸ್ತುತ, ಮೊಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ದೇಶವನ್ನು ನಡೆಸುತ್ತಿದೆ. ಮೊಹಮ್ಮದ್ ಯೂನಸ್ ಎಲ್ಲಾ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳಿಗೆ ಶಾಂತಿಯನ್ನು ಕಾಪಾಡಿಕೊಳ್ಳಲು ಮತ್ತು ಪ್ರಜಾಪ್ರಭುತ್ವ ನಿಯಮಗಳನ್ನು ಅನುಸರಿಸಲು ಮನವಿ ಮಾಡಿದ್ದಾರೆ.

# ಕಲಾ ತಂಡಗಳು ಆರೋಗ್ಯ ಸೇವೆಗಳ ಮಾಹಿತಿಯನ್ನು ಜನತೆಗೆ ತಲುಪಿಸುವ ಉತ್ತಮ ಮಾಧ್ಯಮ: ಶರಣ ಬಸವರಾಜ.

ನೈಜ್ಯ ದೆಸೆ ನ್ಯೂಸ್

**ಕರ್ನಾಟಕ ಸರಕಾರವು ಜನರ ಆರೋಗ್ಯದ ದೃಷ್ಟಿಯಿಂದ ವಿವಿಧ ಆರೋಗ್ಯ ಯೋಜನೆ, ಸೇವೆಗಳ ಮಾಹಿತಿಯನ್ನು ಗ್ರಾಮೀಣ ಕಲೆಯ ಮೂಲಕ ಜನತೆಗೆ ಮುಟ್ಟಿಸುವ ಕಾರ್ಯವನ್ನು ಜನತೆಯು ಸದುಪಯೋಗ ಪಡೆಯುವಂತೆ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಶರಣಬಸವರಾಜ ತಿಳಿಸಿದರು.**

ಇತ್ತೀಚಿಗೆ ಜರುಗಿದ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಾನಪದ ಕಲಾ ಪ್ರದರ್ಶನದ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಜಾಗೃತಿಯ ಕಲಾ ಪ್ರದರ್ಶನ ಕುರಿತು ಮಾತನಾಡಿ ಉತ್ಸವದ ನಂತರ ಗ್ರಾಮೀಣ ಭಾಗದಲ್ಲಿ ವೈಯಕ್ತಿಕ ಆರೋಗ್ಯಕ್ಕೆ ರಕ್ತಹೀನತೆಗೆ ತಡೆಗೆ ಗ್ರಾಮ




ಪಂಚಾಯತಗಳ ಮೂಲಕ ಶೌಚಾಲಯ ಬಳಕೆಗೆ ನಡೆಯುತ್ತಿರುವ ಅಭಿಯಾನ ಕುರಿತು ಹೆಚ್ಚು ಮಾಹಿತಿ ನೀಡಲು ಹಾಗೂ ಆರೋಗ್ಯ ಸೇವೆಗಳನ್ನು ಜನತೆಗೆ ಆಸ್ಪತ್ರೆಗೆ ಸಂತಸದಿಂದ ಆಗಮಿಸಿ ಸೇವೆ ಪಡೆಯುವ ಬಗ್ಗೆ ವ್ಯಾಪಕ ಮಾಹಿತಿ ನೀಡಲು ಹಾಗೂ ಜನತೆ ಇದರ ಸದುಪಯೋಗ ಪಡೆಯಲು ವಿನಂತಿಸಿದರು.

ಈ ಸಂದರ್ಭದಲ್ಲಿ ಮುಖಾಮುಖಿ ಕಲಾ ತಂಡವು ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಒದಗಿಸುವ ಉಚಿತ ಸುರಕ್ಷಿತವಾದ ಹೆರಿಗೆ ಸೇವೆ, ರಕ್ತಹೀನತೆ ತಡೆ, ತಾಯಿ ಎದೆಹಾಲಿನ ಮಹತ್ವ, ಲಸಿಕೆಗಳು, ಹದಿಹರಿಯದವರ ಆರೋಗ್ಯ ಸಮಸ್ಯೆಗಳು, ಅಗತ್ಯವುಳ್ಳವರಿಗೆ ರಕ್ತ ಒದಗಿಸುವಿಕೆ, ಉಚಿತ ಕನ್ನಡಕ ವಿತರಣೆ, ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ, ದಂತಭಾಗ್ಯದಡಿ ಹಲ್ಲಿನ ಸೇಟ್ ಅಳವಡಿಕೆ, ಸಂತಾನ ನಿರೋಧಕ ಶಸ್ತ್ರಚಿಕಿತ್ಸೆ, ಹೃದಯ ಆರೈಕೆಗಾಗಿ ಡಾ ಪುನೀತ್ ರಾಜಕುಮಾರ್ ಹೃದಯಜ್ಯೋತಿ ಯೋಜನೆ, ಕಿಡ್ನಿ ಆರೈಕೆಗೆ ಡಯಾಲಿಸಿಸ್ ಸೇವೆ ಮುಂತಾದವುಗಳು ಹಾಗೂ ಬಾಲ್ಯವಿವಾಹ ತಡೆ, ಭ್ರೂಣ ಲಿಂಗಪತ್ತೆ ನಿಷೇಧ ಕಾಯ್ದೆಯಡಿ ದಂಡ ಜೈಲು ಶಿಕ್ಷೆ, ನಗುಮಗು, 108 ಆಂಬ್ಯುಲೆನ್ಸ್ ಸೇವೆ, ಸಮುದಾಯದಲ್ಲಿ ಕಂಡುಬರಬಹುದಾದ ಸಾಂಕ್ರಾಮಿಕ ರೋಗಗಳ ತಡೆಗೆ ಕ್ಷಿಪ್ರ ನಿಗಾವಣೆ, ಪರೀಕ್ಷೆ, ಕುಷ್ಟ ರೋಗ, ಕ್ಷಯರೋಗ, ಉಪಶಮನ ಆರೈಕೆ, ಆಪ್ತಸಮಾಲೋಚನೆ, ಕುರಿತು ಜಾಗೃತಿ ನೀಡಿದರು. ಈ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ ಅಮೃತ್ ಹುಕ್ಕೇರಿ, ವೈದ್ಯಾಧಿಕಾರಿ, ಜಿಲ್ಲಾ ಪಂಚಾಯತನ ಆಸ್ಪರೇಷನ್ ಕಾರ್ಯಕ್ರಮದ ಡಾ ಜ್ಞಾನಸುಂದರಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕೆಕೆಆರ್‌ಟಿಸಿ ಅಧಿಕಾರಿಗಳು, ಡಿವೈಹೆಚ್‌ಇಓ ಬಸಯ್ಯ, ಹಾಗೂ ಸಮನ್ವಯ ಕಲಾ ತಂಡದ ಉಮಾಪತಿ ಸೇರಿದಂತೆ ಕಲಾವಿದರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಫೆ.14ರಂದು ಬಿಎಎಸ್ ಇಂಟರ್‌ನ್ಯಾಶನಲ್ ಶಾಲೆಯ ನೂತನ ಕಟ್ಟಡ ಉದ್ಘಾಟನೆ, ಫೆ.22ರಂದು ಟ್ಯಾಲೆಂಟ್ ಅವಾರ್ಡ್ ಪರೀಕ್ಷೆ




ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಪಟ್ಟಣದ ಆಲಮಟ್ಟಿ ರಸ್ತೆಯ ಗೆದ್ದಲಮರಿ ಹತ್ತಿರ ಇರುವ ಬಿಎಎಸ್ ಇಂಟ–ರ್‌ನ್ಯಾಶನಲ್ ಶಾಲೆಯ ಪ್ರಥಮ ವಾರ್ಷಿಕೋತ್ಸವ ಹಾಗೂ ನೂತನ ಶಾಲಾ ಕಟ್ಟಡದ ಉದ್ಘಾಟನಾ ಸಮಾರಂಭ ಫೆಬ್ರವರಿ 14ರಂದು ಮಧ್ಯಾಹ್ನ 3.30ಕ್ಕೆ ನಡೆಯಲಿದೆ ಹಾಗೂ ಬಿಎಎಸ್ ಟ್ಯಾಲೆಂಟ್ ಅವಾರ್ಡ್ ಪರೀಕ್ಷೆ ಫೆಬ್ರವರಿ 22ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದ್ದು, ಅರ್ಜಿ ಸಲ್ಲಿಸಲು ಫೆಬ್ರವರಿ 21 ಕೊನೆಯ ದಿನಾಂಕವಾಗಿದೆ.**

ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಶಾಲಾ ಶುಲ್ಕದಲ್ಲಿ ರಿಯಾಯಿತಿ ಹಾಗೂ ಆಕರ್ಷಕ ಬಹುಮಾನಗಳನ್ನು ನೀಡಲಾಗುತ್ತದೆ ಎಂದು ಸಂಸ್ಥೆಯ ಅಧ್ಯಕ್ಷ ಮಹಾಂತಗೌಡ ಬಿರಾದಾರ ತಿಳಿಸಿದ್ದಾರೆ. ಬುಧವಾರ ಶಾಲೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮಕ್ಕೆ ವಿವಿಧ ಮಠಾಧೀಶರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಶಾಸಕ ಸಿ.ಎಸ್. ನಾಡಗೌಡ ನೂತನ ಕಟ್ಟಡವನ್ನು ಉದ್ಘಾಟಿಸಲಿದ್ದು, ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಆದ–ಾಯ ತೆರಿಗೆ ಇಲಾಖೆ ಆಯುಕ್ತ ಶಿವಾನಂದ ಕಲಕೇರಿ, ಸಿಂದಗಿ ಶಾಸಕ ಅಶೋಕ ಮನಗೂಳಿ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ ಜ್ಯೋತಿ ಬೆಳಗಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದು, ಈ ಸಂದರ್ಭದಲ್ಲಿ ಸಾಧಕರನ್ನು ಸನ್ಮಾನಿಸಲಾಗುವುದು ಎಂದು ಆಡಳಿತಾಧಿಕಾರಿ ಪ್ರಭುಗೌಡ ಬಿರಾದಾರ ಹೇಳಿದರು. ಶಾಲೆಯ ಪ್ರಿನ್ಸಿಪಾಲ್ ರಿಷಿಕಾ ನಾಯ್ಕ ಹಾಗೂ ಉಪಪ್ರಿನ್ಸಿಪಾಲ್ ಸಲ್ಮಾನ್ ಖಾನ್ ಮಾತನಾಡಿ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಭವಿಷ್ಯದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು ಸಂಸ್ಥೆಯ ಪ್ರಮುಖ ಗು–ರಿಯಾಗಿದೆ ಎಂದು ತಿಳಿಸಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸಿಬಿಎಸ್‌ಸಿ ಶಿಕ್ಷಣದ ಅವಕಾಶ ಕಲ್ಪಿಸುವ ಉದ್ದೇಶದಿಂದ ಶಾಲೆ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಶಾಲೆಯ ಪ್ರಾಚಾರ್ಯ ಸಲ್ಮಾನ್ ಖಾನ್ ಎಚ್., ರಿಷಿಕಾ ನಾಯ್ಕ, ಮಾರ್ಗದರ್ಶಕ ಶಿವನಗೌಡ ಬಿರಾದಾರ ಹಾಗೂ ಕಾರ್ಯದರ್ಶಿ ಎಸ್. ಎಸ್. ಬಿರಾದಾರ ಉಪಸ್ಥಿತರಿದ್ದರು.

# ಬೇಸಿಗೆಯಲ್ಲಿ ಎಲ್ಲಾ ಕಡೆಗಳಲ್ಲೂ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆಯಾಗಲಿ: ನಿತೀಶ್ ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಬೇಸಿಗೆ ಆಗಮನದ ಹಿನ್ನೆಲೆಯಲ್ಲಿ ಈಗಾಗಲೇ ಬಿಸಿಲು ಏರಲಾರಂಭಿಸಿದೆ. ಆದ್ದರಿಂದ ರಾಯಚೂರು ಜಿಲ್ಲೆಯಲ್ಲಿ ಮುಂಬರುವ ಬೇಸಿಗೆಯ ಸಮಯದಲ್ಲಿ ಸಮರ್ಪಕವಾದ ಕುಡಿಯುವ ನೀರಿನ ವ್ಯವಸ್ಥೆಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.**

ನೂತನ ಜಿಲ್ಲಾಡಳಿತ ಭವನದಲ್ಲಿ ಕೇಸ್ವಾನ್ ಹಾಲನಲ್ಲಿ ಫೆ.12ರ ಸಂಜೆ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಅವರು ಮಾತನಾಡಿದರು. ಈ ಭಾಗಕ್ಕೆ ನೀರು ಪೂರೈಸುವ ತುಂಗಭದ್ರಾ ಡ್ಯಾಮನ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾಮಗಾರಿ ಹಿನ್ನೆಲೆಯಲ್ಲಿ ತುಂಗಾ ಕಾಲುವೆ ನೀರು ಅವಲಂಭಿಸಿರುವ ಸಿಂಧನೂರು, ಮಾನ್ವಿ, ಮಸ್ಕಿ, ಸಿರವಾರ ಮತ್ತು ರಾಯಚೂರು ತಾಲೂಕುಗಳಲ್ಲಿ ನೀರಿನ ಲಭ್ಯತೆ ಪರಿಸ್ಥಿತಿಯ ಬಗ್ಗೆ ಈಗಿನಿಂದಲೇ ಗಮನ ಹರಿಸಬೇಕು. ಈ ಭಾಗದ ಕೆರೆಗಳಲ್ಲಿ ಈಗಿರುವ ನೀರಿನ ಪ್ರಮಾಣ ಎಷ್ಟು? ಕೆರೆಗಳನ್ನು ಇನ್ಮುಂದೆ ಯಾವ ವೇಳೆಗೆ ತುಂಬಿಸಬೇಕು? ಎನ್ನುವಂತಹ ಅಂಶಗಳ ಬಗ್ಗೆ ಆಯಾ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪುರಸಭೆ, ನಗರಸಭೆ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲೆಯ ಆಯಾ ತಾಲೂಕಿನಲ್ಲಿನ ಕೆರೆಗಳಲ್ಲಿನ ನೀರಿನ ವ್ಯವಸ್ಥೆಯ ಬಗ್ಗೆ ಜಿಲ್ಲಾಧಿಕಾರಿಗಳು ಆಯಾ ತಹಸೀಲ್ದಾರಗಳಿಂದ ಸಮಗ್ರ ಮಾಹಿತಿ ಪಡೆದುಕೊಂಡರು.




ಸಿಂಧನೂರ ತಾಲೂಕಿನಲ್ಲಿ ಒಟ್ಟು 155 ಕೆರೆಗಳಿದ್ದು, ಈ ಪೈಕಿ 151 ಕೆರೆಗಳು ಸಹ ಭಾಗಶಃ ತುಂಬಿವೆ. ಮಾರ್ಚ ಕೊನೆಯ ವಾರದಲ್ಲಿ ನಮಗೆ ನೀರಿನ ಅವಶ್ಯಕತೆ ಬರುತ್ತದೆ ಎಂದು ಸಿಂಧನೂರ ತಹಸೀಲ್ದಾರು ಸಭೆಗೆ ಮಾಹಿತಿ ನೀಡಿದರು. ಮಾನವಿ ತಾಲೂಕಿನಲ್ಲಿ ಒಟ್ಟು 18 ಕೆರೆಗಳಿದ್ದು ಎಲ್ಲ ಕೆರೆಗಳು ಭಾಗಶಃ ತುಂಬಿದ್ದು ಇನ್ನು 45 ದಿನಗಳವರೆಗೆ ನಮಗೆ ನೀರಿನ ಸಮಸ್ಯೆಯಾಗುವುದಿಲ್ಲ ಎಂದು ಮಾನ್ವಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ–ರಿಗಳು ಸಭೆಗೆ ಮಾಹಿತಿ ನೀಡಿದರು. ಸಿರವಾರ ತಾಲೂಕಿನಲ್ಲಿ ಒಟ್ಟು 43 ಕೆರೆಗಳಿವೆ. ಈ ಪೈಕಿ 4 ಕೆರೆಗಳು ಪೂರ್ಣ ತುಂಬಿವೆ. ಇನ್ನು 39 ಕೆರೆಗಳು ಭಾಗಶಃ ತುಂಬಿವೆ. ಅತ್ತನೂರ ಮತ್ತು ಕಲ್ಲೂರ ಪಂಚಾಯಿತಿಯ ವ್ಯಾಪ್ತಿಯ ಕೆರೆಗಳಿಗೆ ನೀರಿನ ಕೊರತೆ ಇದೆ ಎಂದು ಸಿರವಾರ ತಾಲೂಕು ಅಧಿಕಾ–ರಿಗಳು ಮಾಹಿತಿ ನೀಡಿದರು. ಮಸ್ಕಿ ತಾಲೂಕಿನಲ್ಲಿ ಒಟ್ಟು 21 ಕೆರೆಗಳಿದ್ದು, ಈ ಪೈಕಿ 16 ಕೆರೆಗಳಲ್ಲಿ ನೀರು ಇದೆ. ಇನ್ನುಳಿದ ಕೆರೆಗಳಿಗೆ ನೀರಿನ ಕೊರತೆಯಾಗಿದೆ ಎಂದು ಮಸ್ಕಿ ಪುರಸಭೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ತಾಲೂಕಿನಲ್ಲಿ 15 ಕೆರೆಗಳಿದ್ದು ಎಲ್ಲ ಕೆರೆಗಳು ಭಾಗಶಃ ತುಂಬಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಮುದಗಲ್ ಪಟ್ಟಣದಲ್ಲಿ ಸದ್ಯಕ್ಕೆ ನೀರಿನ ತೊಂದರೆ ಇಲ್ಲ. ನಾರಾಯಾಣಪುರ ಡ್ಯಾಮನಿಂದ ಅವಶ್ಯಕ ಸಂದರ್ಭದಲ್ಲಿ ನೀರು ಪಡೆದುಕೊಳ್ಳವುದಾಗಿ ಅಲ್ಲಿನ ಪುರಸಭೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ಸಿಟಿಗೆ ತೊಂದರೆಯಾಗದಿರಲಿ: ರಾಯಚೂರು ಸಿಟಿ ಮತ್ತು ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಕುಡಿವ ನೀರಿನ ಪರಿಸ್ಥಿತಿಯ ಬಗ್ಗೆ ಜಿಲ್ಲಾಧಿಕಾರಿಗಳು ಪಾಲಿಕೆಯ ಅಧಿಕಾರಿಗಳು ಮತ್ತು ತಹಸೀಲ್ದಾರ ಅವರಿಂದ ಮಾಹಿತಿ ಪಡೆದುಕೊಂಡರು. ಗಣೇಕಲ್ ಜಲಾಶಯ ಮತ್ತು ಅಲ್ಲಿನ ನೀರಿನ ನಿರ್ವಹಣೆ ಕುರಿತು ಗಮನ ಹರಿಸಿ ರಾಯಚೂರು ಸಿಟಿಗೆ ಸಮರ್ಪಕ ಕುಡಿವ ನೀರಿಗೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಲಿಂಗಸೂರು ತಾಲೂಕಿನಲ್ಲಿ ಅವ್ಯವಸ್ಥೆಯಾಗದಿರಲಿ: ಲಿಂಗಸೂರು ತಾಲೂಕಿನಲ್ಲಿ ಕಳೆದ ಬಾರಿ ಬೇಸಿಗೆಯ ಅವಧಿಯಲ್ಲಿ ಕುಡಿವ ನೀರು ಪೂರೈಕೆಯಲ್ಲಿ ಸ್ವಲ್ಪ ಮಟ್ಟಿಗೆ ವ್ಯತ್ಯಯ ಉಂಟಾಗಿ–ತ್ತು. ಈ ವರ್ಷ ಹಾಗಾಗದಂತೆ ಸಾಕಷ್ಟು ಮುಂಜಾಗ್ರತೆ ವಹಿಸಬೇಕು. ಬೇಸಿಗೆ ಅವಧಿಯಲ್ಲಿ ಲಿಂಗಸೂರ ತಾಲೂಕಿಗೆ ಇಂತಿಷ್ಟು ಪ್ರಮಾಣದ ನೀರು ಬೇಕು ಎಂದು ನಾಂರಾಯಣಪುರ ಡ್ಯಾಮನ ಅಧಿಕಾರಿಗಳಿಗೆ ನೀರಿನ ಬೇಡಿಕೆಯ ಪತ್ರ ತುರ್ತು ರವಾನೆಗೆ ಕ್ರಮ ವಹಿಸಬೇಕು ಎಂದು ಸಹಾಯಕ ಆಯುಕ್ತರು, ತಹಸೀಲ್ದಾರರು, ಪುರಸಭೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಪ್ರತಿ ತಿಂಗಳು ಟಾಸ್ಕಫೋರ್ಸ್ ಸಭೆಗಳಾಗಲಿ: ಎಲ್ಲ ತಾಲೂಕುಗಳಲ್ಲಿ ಪ್ರತಿ ತಿಂಗಳು ಕಡ್ಡಾಯವಾಗಿ ಟಾಸ್ಕಫೋರ್ಸ್ ಸಭೆಗಳು ನಡೆಯುವಂತೆ ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ–ರಿಗಳು ಸಮನ್ವಯ ವಹಿಸಿ ಅಗತ್ಯ ವ್ಯವಸ್ಥೆ ಮಾಡಬೇಕು. ಕಾಲರಾ, ವಾಂತಿ ಬೇದಿ ಪ್ರಕರಣಗಳು ದಾಖಲು ಆಗದ ಹಾಗೆ ಮುಂಜಾಗ್ರತೆ ವಹಿಸಿ ನೀರಿನ ಪರೀಕ್ಷೆಗೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಗ್ರಾಮೀಣ ಕುಡಿವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಖಾಸಗಿ ಬೋರವೆಲ್‌ಗೆ ಆದ್ಯತೆ ನೀಡಿ: 2025–2026ನೇ ವರ್ಷದಲ್ಲಿ ಸಾಕಷ್ಟು ಮಳೆಯಾಗಿ ಅಂತರ್ಜಲ ನೀರಿನ ಮಟ್ಟ ಸುಧಾರಿಸಿದೆ. ಹಾಗಾಗಿ ನೀರಿನ ಸಮಸ್ಯೆ ಕಂಡು ಬಂದಲ್ಲಿ ಬೋರವೆಲ್ ಕೊರೆಯಿಸಲು ಕ್ರಮ ವಹಿಸಬೇಕು. ಕೊಳವೆಬಾವಿ ವಿಫಲವಾದಲ್ಲಿ ಹತ್ತಿರದ ಖಾಸಗಿ ಬೋರವೆಲ್‌ಗಳಿಂದಲೇ ನೀರು ಪೂರೈಕೆಗೆ ಹೆಚ್ಚಿನ ಒತ್ತು ಕೊಡಬೇಕು. ಟ್ಯಾಂಕರ್ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬಾರದು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಪಂ ಸಿಇಓ ನಿರ್ದೇಶನ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕಾಂದೂ ಅವರು ಮಾತನಾಡಿ, ಯಾವುದೇ ಕಡೆಗಳಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಪೈಪಲೈನ್ ದುರಸ್ತಿಗೆ ಒತ್ತು ಕೊಡಬೇಕು. ಮೇಲ್ಮಟ್ಟದ ಜಲಾಗಾರಗಳನ್ನು ಪ್ರತಿ ತಿಂಗಳು ಕಡ್ಡಾಯವಾಗಿ ಶುಚಿಗೊಳಿಸಬೇಕು. ಕಾಲಕಾಲಕ್ಕೆ ನೀರಿನ ಪರೀಕ್ಷೆ ನಡೆಸಿಯೇ ನೀರು ಪೂರೈಕೆಗೆ ಒತ್ತು ಕೊಡಬೇಕು. ಈ ಬಗ್ಗೆ ಎಲ್ಲ ತಾಲೂಕಿನ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ–ರಿಗಳು ಮತ್ತು ಎಲ್ಲ ಪಿಡಿಓಗಳು ಗಮನ ಹ–ರಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ವಿಡಿಯೋ ಸಂವಾದ ಸಭೆಯಲ್ಲಿ ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣೆಪ್ಪ ಕಲಶೆಟ್ಟಿ, ಆಯಾ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ–ರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಕೆಬಿಜೆಎನ್‌ಎಲ್‌ನ ಅಧಿಕಾರಿ ಬಸನಗೌಡ, ಆರೋಗ್ಯ ಇಲಾಖೆಯ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಗಣೇಶ್, ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆಯ ಅಭಿಯಂತರ ನಾಗರಾಜ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# 4 ಕಾರ್ಮಿಕ ಸಂಹಿತೆ (ಲೇಬರ್ ಕೋಡ್) ಹಿಂಪಡೆಯುವಂತೆ ಎ ಐ ಯು ಟಿ ಯು ಸಿ ಆಗ್ರಹ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಕೇಂದ್ರ ಸರ್ಕಾರದ ದುಡಿಯುವ ವರ್ಗದ ವಿರೋಧಿ 4 ಕರಾಳ ಕಾರ್ಮಿಕ ಸಂಹಿತೆ(ಲೇಬರ್ ಕೋಡ್)ಗಳ ವಿರುದ್ಧ ಮತ್ತು ದುಡಿಯುವ ಜನರು ಸೇರಿದಂತೆ ಎಲ್ಲಾ ಜನರ ಹಕ್ಕುಗಳು ಮತ್ತು ಬದುಕಿನ ಮೇಲೆ ನಡೆಸುತ್ತಿರುವ ಅತ್ಯಂತ ನಿರ್ಣಯವಾದ ಸರ್ವಾಗೀಣ ದಾಳಿಯ ವಿರುದ್ಧ ಫೆಬ್ರುವರಿ 12, ರಂದು ಕೇಂದ್ರೀಯ ಕಾರ್ಮಿಕ ಸಂಘಟನೆಗಳು ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಕರೆ ನೀಡಿದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಪ್ರತಿಭಟನೆ ಮಾಡುವ ಮೂಲಕ ಆಲ್ ಇಂಡಿಂ–ಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟ–ರ್ (AIUTUC) ರಾಯಚೂರು ಜಿಲ್ಲಾ ಘಟಕದ ವತಿಯಿಂದ ಸಹಾಯಕ ಆಯುಕ್ತರ ಮುಖಾಂತರ ಪ್ರಧಾನ ಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಿದರು.**




ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಸಾರ್ವಜನಿಕ ಸೇವೆಗಳನ್ನು ಖಾಸಗೀಕರಿಸುತ್ತ ದೊಡ್ಡ ಕಾರ್ಪೊರೇಟ್ ಕಂಪನಿಗಳಿಗೆ ಮಾರಾಟ ಮಾಡುವುದನ್ನು ಮುಂದುವರೆಸಿರುವುದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಇದರ ಮಧ್ಯೆ ನರೇಗಾ ಯೋಜನೆಯನ್ನು ವಿಬಿ–ಜಿ–ರಾಮ್ ಎಂದು ಬದಲಿಸಿ ಉದ್ಯೋಗ ಖಾತ್ರಿಯ ಹಕ್ಕನ್ನೇ ಕಸಿದುಕೊಂಡು, ಹಳ್ಳಿಯ ಬಡಜನರ ಆಸರೆಯನ್ನು ಕಿತ್ತುಕೊಂಡಿದೆ. ವಿದ್ಯುತ್ ತಿದ್ದುಪಡಿ ಮಸೂದೆ –2025ನ್ನು ಕಾಯ್ದೆ ಮಾಡಿ, ವಿದ್ಯುತ್ ಸರಬರಾಜು ಖಾಸಗೀಕರಣಗೊಳಿಸಲು ಮುಂದಾಗಿದ್ದು, ಇದುವರೆಗೂ ರಕ್ಷಿಸಲ್ಪಟ್ಟಿದ್ದ ವಿಮಾ ಕಂಪನಿಗಳನ್ನು ಶೇ. 100 ರಷ್ಟು ವಿದೇಶಿ ಮತ್ತು ದೇಶಿಯ ವ್ಯಾಪಾರಿ ಮನೆತನಗಳಿಗೆ ತೆರೆದಿರುವುದು ಅತ್ಯಂತ ಆತಂಕದಿಂದ ಗಮನಿಸುತ್ತಿದ್ದೇವೆ.

ಅಣುಶಕ್ತಿ ಅಭಿವೃದ್ಧಿಪಡಿಸುವ (ಶಾಂತಿ) ಹೆಸರಿನಲ್ಲಿ ಜನರ ಸುರಕ್ಷತೆಗೆ ಆಣುಶಕ್ತಿ ಭದ್ರತೆಗೆ ಅಪಾಯವನ್ನು ತಂದಿದೆ. ಈಗ ಕಾರ್ಮಿಕರ ಪ್ರತಿರೋಧವನ್ನು ತಡೆಗಟ್ಟಲು, ವ್ಯಾಪರ ಸುಗಮಗೊಳಿಸುವ ಉದ್ದೇಶದಿಂದ ತಮ್ಮ ಸರ್ಕಾರವು ಲೇಬರ್ ಕೋಡ್ ಗಳನ್ನು ಅನುಷ್ಠಾನಗೊಳಿಸುತ್ತಿದೆ. ಮುಷ್ಕರದ ಹಕ್ಕನ್ನು ಕಸಿದುಕೊಳ್ಳುವ, ಕಾರ್ಮಿಕರ ಸಾಮೂಹಿಕ ಚೌಕಾಸಿ ಹಕ್ಕನ್ನು ಮೊಟಕುಗೊಳಿಸುವ, ನಿಗದಿತ ಅವಧಿಗೆ ಉದ್ಯೋಗದ ಮೂಲಕ ಖಾಯಂ ಸ್ವರೂಪದ ಕೆಲಸಗಳಿಗೆ ತಿಲಾಂಜಲಿ ನೀಡುತ್ತಿರುವುದು, ದಿನಕ್ಕೆ 12 ತಾಸು ಕೆಲಸದ ಅವಧಿ ಹೆಚ್ಚಿಸಿರುವುದು ಮತ್ತು ಮಹಿಳಾ ಉದ್ಯೋಗಿಗಳಿಗೆ ರಾತ್ರಿ ಪಾಳೀಯಲ್ಲೂ ದುಡಿಸಿಕೊಳ್ಳಲು ಅವಕಾಶ ನೀಡುವ ಈ ಲೇಬರ್ ಕೋಡ್ ಗಳು ಕಾರ್ಮಿಕರ ಆರೋಗ್ಯ, ಭದ್ರತೆ ಬಗ್ಗೆ ಕಿಂಚಿತ್ತೂ ಕಾಳಜಿ ತೋರದೆ, ತ್ಯಾಗ–ಬಲಿದಾನಗಳ ಮೂಲಕ ಗಳಿಸಿಕೊಂಡ ಹಕ್ಕುಗಳನ್ನು ಕಿತ್ತುಕೊಳ್ಳುತ್ತಿದೆ.

ಕೇಂದ್ರ ಸರ್ಕಾರದ ವಿವಿಧ ಸ್ಕೀಮ್ ಗಳಲ್ಲಿ ದುಡಿಯುವ ಕೋಟ್ಯಾಂತರ ಆಶಾ, ಅಂಗನವಾಡಿ, ಬಿಸಿಯೂಟ ಕಾರ್ಮಿಕರನ್ನು ಸರ್ಕಾರಿ ನೌಕರರ ಸ್ಥಾನಮಾನ ನೀಡದೇ, ಕನಿಷ್ಠ ವೇತನ ಮತ್ತು ಪಿಎಫ್, ಇಎಸ್‌ಐ, ನಿವೃತ್ತಿ ಪರಿಹಾರಗಳನ್ನು ಒದಗಿಸದೇ ಬಿಡಿಗಾಸಿನಲ್ಲಿ ದುಡಿಸಿಕೊಂಡು ಶೋಷಿಸಲಾಗುತ್ತಿದೆ. ಗುತ್ತಿಗೆ ಕಾರ್ಮಿಕರು, ನಿರ್ಮಾಣ ಕಾರ್ಮಿಕರು, ಬೀಡಿ ಕಾರ್ಮಿಕರು, ಗೃಹ ಕಾರ್ಮಿಕರು, ವಲಸೆ ಕಾರ್ಮಿಕರು, ಗಿಗ್ ಫ್ಲಾಟ್ ಫಾರ್ಮ್ ಕಾರ್ಮಿಕರು, ಅಪಾರ ಸಂಖ್ಯೆಯ ಅನೌಪಚಾರಿಕ, ಅಸಂಘಟಿತ ಕಾರ್ಮಿಕರಿಗೆ ಭದ್ರತೆ ಇಲ್ಲದೆ ನಿರ್ದಯ ಶೋಷಣೆಗೆ ಗುರಿ ಮಾಡಲಾಗಿದೆ. ಆದ್ದರಿಂದ ದೇಶದ ಸಂಪತ್ತನ್ನು ಸಂರಕ್ಷಿಸಲು, ದುಡಿಯುವ ಜನರ ಜೀವನೋಪಾಯ ಮತ್ತು ಹಕ್ಕುಗಳನ್ನು ಉಳಿಸಲು, ಎಲ್ಲಾ ಮಾನವ ವಿರೋಧಿ ಮಸೂದೆ–ನೀತಿಗಳನ್ನು ಜಾರಿಗೆ ತರುವುದನ್ನು ಹಿಂಪಡೆಯಬೇಕು 4ಕರಾಳ ಲೇಬರ್ ಕೋಡ್ ಗಳನ್ನು ಹಿಂಪಡೆಯಬೇಕು.

ವಿಬಿ.ಜಿ ರಾಮ್.ಜಿ, ವಿಮಾ ಕಾಯ್ದೆ, ಶಾಂತಿ ಕಾಯ್ದೆ ರದ್ದುಗೊಳಿಸಬೇಕು. ವಿದ್ಯುತ್ ಕಾಯ್ದೆ ತಿದ್ದುಪಡಿ, ಬೀಜ ಕಾಯ್ದೆ, ಭೂಸ್ವಾಧೀನ ಕಾಯ್ದೆ ರದ್ದುಗೊಳಿಸಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಎಐಡಿವೈಓ ಸಂಘಟನೆಯ ರಾಜ್ಯ ಅಧ್ಯಕ್ಷ ಶರಣಪ್ಪ ಉದ್ಬಾಳ, ವಸತಿನಿಲಯ ಕಾರ್ಮಿಕರಾದ ಹನಮರಡ್ಡೆ, ಶಿವರಾಜ್, ಆಶಾ ಕಾರ್ಯಕರ್ತೆಯರಾದ, ಜಯಲಕ್ಷ್ಮಿ, ಲಲಿತ, ಶಿವಮ್ಮ, ರುದ್ರಮ್ಮ, ದೇವಮ್ಮ, ಗದ್ದೆಮ್ಮ ನಾಗಮ್ಮ, ತಿರುಪತಿ ಗೋನವಾರ ಮುಂತದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.